
26 ಸೆಪ್ಟೆಂಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 197 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ನಟಿ ಆಶಿಕಾ ರಂಗನಾಥ್ ನಟನೆಯ ಗತವೈಭವ ಚಿತ್ರದ ಟೀಸರ್ ಅನಾವರಣಗೊಂಡಿದೆ. ಈ ಸಿನಿಮಾ ವಿಶ್ವದಾದ್ಯಂತ ನ.14 ರಂದು ಬಿಡುಗಡೆಯಾಗಲಿದೆ.




ಭೈರಪ್ಪ ಅಗಲಿಕೆ : ಭಾವತಂತು ತುಂಡಾದ ಅನುಭವ » 2



ದೂರಸಂವೇದಿ ಅನ್ವಯಿ ಕೇಂದ್ರಕ್ಕೆ ಇಟಾಲಿಯನ್ ನಿಯೋಗ ಭೇಟಿ » 3



ಕಸ ವಿಲೇವಾರಿ ಮಾಡದವರು ಜವಾಬ್ದಾರಿ ಮರೆತ ನಾಗರಿಕರು » 4


## ಗ್ರಾಮ ಸಹಾಯಕರಿಗೆ 10 ಲಕ್ಷ ರೂ. ಇಡುಗಂಟು

• ಪ್ರಜೋದಯ ವರದಿ

**ಬೆಂಗಳೂರು:** ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿ ಸುತ್ತಿರುವ ಗ್ರಾಮ ಸಹಾಯಕರು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಅಥವಾ ಸೇವೆಯಲ್ಲಿರುವಾಗಲೇ ಮೃತರಾದರೆ 10 ಲಕ್ಷ ರೂ. ಇಡುಗಂಟು ನೀಡಲು ಗುರುವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

ಕಾನೂನು ಸಚಿವ ಹೆಚ್.ಕೆ. ಪಾಟೀಲ್ ಅವರು ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಈ ಕುರಿತು ವಿವರ ನೀಡಿ ದರು. ಸೇವೆಯನ್ನು ಗ್ರೂಪ್ ಡಿ ಹುದ್ದೆಯಲ್ಲಿ ಸಕ್ರಮಗೊಳಿಸುವುದು ಅಥವಾ ಗೌರವ ಧನವನ್ನು 15 ರಿಂದ 27 ಸಾವಿರ ರೂ.ಗೆ ಹೆಚ್ಚಿಸುವುದು. ಇವೆರಡಲ್ಲಿ ಒಂದು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದರು.

ಕೇಂದ್ರ ಸರ್ಕಾರವು ಜನ ವಿಶ್ವಾಸ ಕಾಯ್ದೆಯನ್ನು ಜಾರಿಗೆ ತಂದಿದ್ದು, ಅದನ್ನು ರಾಜ್ಯದಲ್ಲಿ ಜಾರಿಗೆ ತರಲು ಕರ್ನಾಟಕ ಬಾಡಿಗೆ ಕಾಯ್ದೆ 1999ರ ವಿವಿಧ ಕಲಂಗಳ ಅಡಿಯಲ್ಲಿ ದಂಡ ಮತ್ತು ಅಪರಾಧ ನಿಬಂಧನೆಗಳಿಗೆ ತಿದ್ದುಪಡಿ ಮಾಡಲು ಸಂಪುಟ ಒಪ್ಪಿಗೆ ನೀಡಿದೆ.

# ಗಣತಿಗೆ ಗೈರಾದವರ ವಿರುದ್ಧ ಶಿಸ್ತು ಕ್ರಮ

## ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ | ಸಮೀಕ್ಷೆಗೆ ತಡೆ ನೀಡಲು ಹೈಕೋರ್ಟ್ ನಕಾರ-ಗೌಪ್ಯತೆ ಕಾಪಾಡಲು ಸೂಚನೆ

• ಪ್ರಜೋದಯ ವರದಿ

**ಬೆಂಗಳೂರು:** ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ (ಜಾತಿಗಣತಿ) ನಡೆಸದ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಗುರುವಾರ ಸಚಿವ ಸಂಪುಟ ನಿರ್ಧರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಅವರು, ಬೆಂಗಳೂರಿನಲ್ಲಿ ಸಮೀಕ್ಷೆಗೆ ಸಿಬ್ಬಂದಿ ಗೈರಾದರೆ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಅಧಿಕಾರವನ್ನು ಮುಖ್ಯ ಆಯುಕ್ತರಿಗೆ ನೀಡಲಾಗಿದೆ. ಇನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಿದ್ದಾರೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ನಿಯೋಜಿಸಲಾದ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ಆದೇಶದ ಪ್ರಕಾರ ತಮ್ಮ ಕರ್ತವ್ಯವನ್ನು ನಿರ್ವಹಿಸದಿದ್ದರೆ ಅಥವಾ ಹಾಜರಾಗದಿದ್ದರೆ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಜಾತಿ ಗಣತಿ ವಿವಾದವಾಗುತ್ತಿರುವ ಹಿನ್ನಲೆ ಕೆಲ ಸಿಬ್ಬಂದಿ ಸಮೀಕ್ಷೆಗೆ ಮನೆ ಮನೆಗೆ ತೆರಳಲು ಹಿಂದೇಟು ಹಾಕುತ್ತಿದ್ದಾರೆ. ಬೇರೆ ಬೇರೆ ಕಾರಣಗಳನ್ನು ನೀಡಿ ಸಮೀಕ್ಷೆಗೆ ತೆರಳಲು ಮುಂದಾಗುತ್ತಿಲ್ಲ. ಈ ಬಗ್ಗೆ ದೂರುಗಳು ಕೇಳಿ ಬಂದ ಹಿನ್ನಲೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ಹಾಜರಾಗದ ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮಕ್ಕೆ ಸೂಚಿಸಿದ್ದಾರೆ ಎಂದರು.



ಈ ಆದೇಶ ಜಿಲ್ಲೆಗಳಿಗೂ ಅನ್ವಯವಾಗುತ್ತದೆ. ಮುಖ್ಯ ಮಂತ್ರಿಗಳು ಶುಕ್ರವಾರ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿ ಕಾರಿಗಳ ಜೊತೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಸಭೆ ನಡೆಸುತ್ತಿದ್ದಾರೆ. ಈ ಸಭೆಯಲ್ಲಿ ಅಗತ್ಯ ನಿರ್ದೇಶನಗಳನ್ನು ನೀಡಲಿದ್ದಾರೆ. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವುದು. ಸೇವಾ ನಿಯಮಗಳಿಗೆ ಅನುಸಾರವಾಗಿರುತ್ತದೆ.

ಸಮೀಕ್ಷೆಯ ಸಮಯದಲ್ಲಿ ಎದುರಿಸುತ್ತಿರುವ ತಾಂತ್ರಿಕ ಸಮಸ್ಯೆಗಳ ಬಗ್ಗೆಯೂ ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ. ಮೊದಲ ಮತ್ತು ಎರಡನೇ ದಿನ ಸರ್ವರ್ ಸಮಸ್ಯೆಗಳಿದ್ದವು ಎಂಬುದು ನಿಜ. ಆದರೆ, ಇಂದು ಪರಿಸ್ಥಿತಿ ಸುಧಾರಿ ಸಿದೆ ಎಂಬ ಮಾಹಿತಿ ಇದೆ ಎಂದು ಹೇಳಿದರು.

### ನೆಟ್‌ವರ್ಕ್, ಆ್ಯಪ್ ಸಮಸ್ಯೆ

ಗಣತಿಗೆ ನೆಟ್‌ವರ್ಕ್ ಸರಿಯಾಗಿ ಸಿಗುತ್ತಿಲ್ಲ, ಆ್ಯಪ್ ಒಮ್ಮೆ ಓಪನ್ ಆದರೆ ಮತ್ತೊಮ್ಮೆ ಓಪನ್ ಆಗುತ್ತಿಲ್ಲ. ಆ್ಯಪ್‌ನಲ್ಲಿ ದತ್ತಾಂಶ ದಾಖಲಿಸಿದರೂ ಮಾಡಿದರೂ ಮಾಹಿತಿ ಅಳಿಸುತ್ತಿದೆ ಎಂದು ಸಮೀಕ್ಷೆ ಮಾಡುತ್ತಿರುವ ಸಿಬ್ಬಂದಿ ಅಳಲು ತೋಡಿಕೊಂಡಿದ್ದಾರೆ. ಹಾಸನ, ದಾವಣಗೆರೆ, ವಿಜಯಪುರ, ದೊಡ್ಡಬಳ್ಳಾಪುರ ಸೇರಿ ರಾಜ್ಯದ ಹಲವೆಡೆ ಶಿಕ್ಷಕರು ಇಂಥಹದ್ದೇ ಸಮಸ್ಯೆ ಯಿಂದ ಪರದಾಡಿದ್ದಾರೆ. ಪ್ರತಿಭಟನೆ ಕೂಡ ನಡೆಸಿದ್ದಾರೆ. ಸಮೀಕ್ಷೆ ಸರಿಯಾಗಿ ನಡೆಯುತ್ತಿಲ್ಲವೆಂದು ಸರ್ಕಾರದ ವಿರುದ್ಧ ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದಾರೆ.

### ದತ್ತಾಂಶ ರಕ್ಷಣೆಗೆ ಕೋರ್ಟ್ ಆದೇಶ

ಗೊಂದಲಗಳಿಗೆ ಕಾರಣವಾಗಿರುವ ಜಾತಿಗಣತಿಗೆ ತಡೆ ನೀಡಲು ಕರ್ನಾಟಕ ಹೈಕೋರ್ಟ್ ನಿರಾಕರಿಸಿದೆ. ಜಾತಿಗಳ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ನಡೆಸುವ ರಾಜ್ಯ ಸರ್ಕಾರದ ಕ್ರಮ ಪ್ರಶ್ನಿಸಿದ್ದ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗು ನ್ಯಾಯ ಮೂರ್ತಿ ಸಿ.ಎಂ.ಜೋಶಿ ಅವರಿದ್ದ ಪೀಠ, ಎರಡು ದಿನವಾದ ಪ್ರತಿವಾದ ಆಲಿಸಿದ್ದು, ಅಂತಿಮವಾಗಿ ಗುರುವಾರ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಗೆ ತಡೆ ನೀಡಲು ನಿರಾಕರಿಸಿದೆ. ಆದರೆ, ಜನರ ದತ್ತಾಂಶದ ಗೌಪ್ಯತೆ ಬಗ್ಗೆ ಸರ್ಕಾರಕ್ಕೆ ಹಾಗು ಹಿಂದುಳಿದ ವರ್ಗಗಳ ಆಯೋಗಕ್ಕೆ ಕೆಲವು ಮಹತ್ವದಷರತ್ತುಗಳನ್ನು ವಿಧಿಸಿ ಮಧ್ಯಂತರಆದೇಶ ಹೊರಡಿಸಿದೆ.

ದತ್ತಾಂಶವನ್ನು ಸರ್ಕಾರ ಸೇರಿ ಯಾರಿಗೂ ಬಹಿರಂಗ ಪಡಿಸಬಾರದು. ದತ್ತಾಂಶದ ಗೌಪ್ಯತೆ ಯನ್ನು ಹಿಂದುಳಿದ ವರ್ಗಗಳ ಆಯೋಗ ರಕ್ಷಿಸಬೇಕು. ಜನರು ಸ್ವಯಂ ಪ್ರೇರಣೆಯಿಂದ ನೀಡಿದರಷ್ಟೇ ಮಾಹಿತಿ ಪಡೆಯಬೇಕು. ಈ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಮಾಹಿತಿ ನೀಡುವಂತೆ ಯಾವುದೇ ಒತ್ತಡ ಹಾಕಬಾರದೆಂದು ಹೈಕೋರ್ಟ್ ಮಹತ್ವದ ಷರತ್ತು ಗಳನ್ನು ವಿಧಿಸಿ ಮಧ್ಯಂತರ ಆದೇಶ ಹೊರಡಿಸಿದೆ. ದತ್ತಾಂಶದ ಗೌಪ್ಯತೆ ಸಂಬಂಧ ಪ್ರಮಾಣಪತ್ರ ಸಲ್ಲಿಸಲು ಹಿಂದುಳಿದ ವರ್ಗಗಳ ಆಯೋಗಕ್ಕೆ ಹೈಕೋರ್ಟ್ ಸೂಚನೆ ನೀಡಿ ಮುಂದಿನ ವಿಚಾರಣೆಯನ್ನು ಡಿಸೆಂಬರ್ 2ನೇ ವಾರಕ್ಕೆ ಮುಂದೂಡಿದೆ.

## ಇಂದು ಶ್ರದ್ಧಾಂಜಲಿ ಸಭೆ

• ಪ್ರಜೋದಯ ವರದಿ

**ಹಾಸನ:** ಸಾಹಿತಿ, ಪದ್ಮಭೂಷಣ ಡಾ.ಎಸ್.ಎಲ್. ಭೈರಪ್ಪ ಹಾಗು ಸ್ವಾತಂತ್ರ್ಯ ಹೋರಾಟಗಾರ ಹೆಚ್.ಎಂ.ಶಿವಣ್ಣ ಅವರ ಸ್ಮರಣಾರ್ಥ ಶ್ರದ್ಧಾಂಜಲಿ ಸಭೆಯನ್ನು ಜಿಲ್ಲಾ ನಾಗರಿಕರ ಸಮಿತಿ ವತಿಯಿಂದ ಸೆ.26ರ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ನಗರದ ಗಾಂಧಿ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಆದಿಚುಂಚನಗಿರಿ ಹಾಸನ ಶಾಖಾ ಮಠದಿಂದ ಶ್ರೀ ಶಂಭುನಾಥ ಸ್ವಾಮೀಜಿ, ವಿಶ್ವ ಒಕ್ಕಲಿಗರ ಮಠದ ಶ್ರೀನಿಶ್ಚಲಾನಂದನಾಥ ಸ್ವಾಮೀಜಿ ಅವರು ಸಾನಿಧ್ಯ ವಹಿಸಲಿದ್ದಾರೆ. ಜಿಲ್ಲಾ ಒಕ್ಕಲಿಗ ಸಂಘದ ಅಧ್ಯಕ್ಷ ಜಿ.ಎಲ್.ಮುದ್ದೇಗೌಡ ಅವರು ಅಧ್ಯಕ್ಷತೆ ವಹಿಸುವರು. ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ.ಸ್ವರೂಪ್, ಮಹಾನಗರ ಪಾಲಿಕೆ ಮೇಯರ್ ಗಿರೀಶ್ ಚನ್ನವೀರಪ್ಪ, ಉಪ ಮೇಯರ್ ಹೇಮಲತಾ ಕಮಲ್‌ಕುಮಾರ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಭಾಗವಹಿಸುವರು.

ಹಿರಿಯ ಪತ್ರಕರ್ತ ಆರ್.ಪಿ.ವೆಂಕಟೇಶ ಮೂರ್ತಿ, ಮಾಜಿ ಶಾಸಕರಾದ ಬಿ.ವಿ.ಕರೀಗೌಡ, ಪ್ರೀತಮ್ ಜೆ.ಗೌಡ, ಉದ್ಯಮಿ ರಾಜಗೋಪಾಲ್ ಶೆಟ್ಟರ್, ಕಸಾಪ ಜಿಲ್ಲಾಧ್ಯಕ್ಷ ಡಾ.ಹೆಚ್.ಎಲ್. ಮಲ್ಲೇಶಗೌಡ, ಹಿರಿಯ ಪತ್ರಕರ್ತರಾದ ಹೆಚ್.ಬಿ.ಮದನಗೌಡ, ಜೆ.ಆರ್.ಕೆಂಚೇಗೌಡ ಮತ್ತಿತರರು ಉಪಸ್ಥಿತರಿರುವರು.

ಸಭೆಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕಾರ್ಯಕ್ರಮ ಆಯೋಜಕರಾದ ರವಿ ನಾಕಲಗೂಡು, ನಾಯಕರಹಳ್ಳಿ ಮಂಜೇಗೌಡ ಕೋರಿದ್ದಾರೆ.

# ಗೊಂದಲದ ಗೂಡಾದ ಇಬ್ಬೀಡು ಪಿಎಸಿಎಸ್ ವಾರ್ಷಿಕ ಸಭೆ

• ಪ್ರಜೋದಯ ವರದಿ

**ಬೇಲೂರು:** ತಾಲ್ಲೂಕಿನ ಇಬ್ಬೀಡು ಗ್ರಾಮದಲ್ಲಿ ಗುರುವಾರ ನಡೆದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವಾರ್ಷಿಕ ಸಭೆ ಗೊಂದಲದ ಗೂಡಾಗಿ ಸದಸ್ಯರ ಪರಸ್ಪರ ವಾಕ್ಸಮರಕ್ಕೆ ಸಾಕ್ಷಿಯಾಯಿತು.

ಸಂಘದಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದ್ದು ತಪ್ಪಿತಸ್ಥರ ವಿರುದ್ಧ ದೂರು ದಾಖಲಿಸಿ ಕ್ರಮ ಜರುಗಿಸಬೇಕು. ಆಡಳಿತ ಮಂಡಳಿ ಈ ಬಗ್ಗೆ ಮೌನವಾಗಿರುವುದು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಸಂಘದ ನಿಯಮ ಉಲ್ಲಂಘಿಸಿ ಬೇರೆ ಗ್ರಾಮಕ್ಕೆ ಹೆಚ್ಚು ಸಾಲ ನೀಡಿದ್ದಾರೆಂದು ಷೇರುದಾರರಾದ ಸಚಿನ್, ದೇವರಾಜ್, ಜಗದೀಶ್, ನವೀನ್, ಲೋಕೇಶ್ ಆಕ್ರೋಶ ವ್ಯಕ್ತಪಡಿಸಿದರು.

ತಮಗೆ ಬೇಕಾದ ಲೆಕ್ಕಪರಿಶೋಧಕರನ್ನು ನೇಮಕ ಮಾಡಿಕೊಂಡು ಹಣ ದುರುಪಯೋಗ ಮಾಡಿಕೊಂಡಿ ದ್ದಾರೆ. 2023-24 ಹಾಗು 2024- 25ನೇ ಸಾಲಿನ ಲೆಕ್ಕಪರಿಶೋಧನೆಯಲ್ಲಿ ಭಾರೀ ಭ್ರಷ್ಟಾಚಾರ ನಡೆದಿದೆ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರೇಮ್ ಕುಮಾರ್ ಅವ್ಯವಹಾರ ಸಮರ್ಥಿಸಿಕೊಳ್ಳುತ್ತಿದ್ದಾರೆಂದು ದೂರಿದರು.



ಆರಂಭದಿಂದ ಸಂಘ ಪಾರದರ್ಶಕವಾಗಿತ್ತು. ಕಳೆದ ನಾಲ್ಕು ವರ್ಷದಿಂದ ಲೆಕ್ಕಪರಿಶೋಧನೆಯಲ್ಲಿ ಭಾರಿ ವಿಭಿನ್ನತೆ ಕಾಣುತ್ತಿದೆ. ಮೊದಲು ಲೆಕ್ಕಪರಿಶೋಧಕರನ್ನು ಬದಲಾಯಿಸಿ ವ್ಯತ್ಯಾಸ ವಾದ ಹಣವನ್ನು ಸಂಘಕ್ಕೆ ಪಾವತಿಸಬೇಕು. ಇಲ್ಲವಾದರೆ ಕಚೇರಿಗೆ ಬೀಗ ಹಾಕಿ ಪ್ರತಿಭಟಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ರಸಗೊಬ್ಬರ, ಪಡಿತರ ವಿತರಣೆಯಲ್ಲಿ ಮೋಸ ಎಸಗಲಾಗಿದೆ. ನಿಗದಿಗಿಂತ ಅಧಿಕ ಸಾಲ ಮಂಜೂರು ಮಾಡಿದ್ದಾರೆಂದು ಗಂಭೀರ ಆರೋಪ ಮಾಡಿದರು.

ಸಂಘದ ಅಧ್ಯಕ್ಷ ಹೆಚ್.ಆರ್. ಚಂದ್ರೇಗೌಡ ಅವರು ಮಾತನಾಡಿ, 2023-24ನೇ ಸಾಲಿನ ವಾರ್ಷಿಕ ವರದಿಯಲ್ಲಿ ವ್ಯತ್ಯಾಸವಾಗಿದೆ. ಲೆಕ್ಕ ಪರಿಶೋಧನೆ ನಡೆಸದೆ ಸರ್ವ ಸದಸ್ಯರ ಸಭೆ ನಡೆಸಿದ್ದು ನಮ್ಮ ಲೋಪ. ಆ ಕಾರಣದಿಂದ ಸದಸ್ಯರು ಸಹಕಾರ ನೀಡಬೇಕು. ವ್ಯತ್ಯಾಸವಾದ ಹಣವನ್ನು ಕಾರ್ಯದರ್ಶಿಗಳಿಂದ ಪಡೆಯುತ್ತೇವೆ. ಸಹಕಾರ ಸಂಘ ತಾಲ್ಲೂಕಿನಲ್ಲಿ ಉತ್ತಮವಾಗಿ ಬೆಳೆಯುತ್ತಿದೆ. ಭ್ರಷ್ಟಾಚಾರಕ್ಕೆ ಅವಕಾಶ ಮಾಡಿಕೊಡುವುದಿಲ್ಲವೆಂದು ಭರವಸೆ ನೀಡಿದರು.

ಉಪಾಧ್ಯಕ್ಷೆ ಚನ್ನಮ್ಮ, ನಿರ್ದೇಶಕರಾದ ರಮೇಶ್, ರವಿಕುಮಾರ್, ಲೋಕೇಶ್ ಶಿವರಾಮಯ್ಯ, ಮಧು, ಅಣ್ಣಪ್ಪ, ಹರೀಶ, ನವೀನ್ ಪ್ರಸಾದ್, ನೀಲಮ್ಮ, ಹೆಚ್‌ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಎಂ.ಜೆ.ದಿನೇಶ್ ಇತರರಿದ್ದರು.

# 35 ವಾರ್ಡ್‌ಗಳಲ್ಲೂ ಕಾಮಗಾರಿಗೆ ಟೆಂಡರ್: ಮೇಯರ್

## ಪಾಲಿಕೆ ಸಾಮಾನ್ಯ ಸಭೆಯಲ್ಲಿ ಸರ್ವಾನುಮತದ ಒಪ್ಪಿಗೆ | ಸೇರ್ಪಡೆಯಾದ ಹಳ್ಳಿಗಳಿಗೂ ಮೂಲಸೌಕರ್ಯದ ಭರವಸೆ

• ಪ್ರಜೋದಯ ವರದಿ

**ಹಾಸನ:** ಮಹಾನಗರ ಪಾಲಿಕೆಯ ಎಲ್ಲಾ 35 ವಾರ್ಡ್‌ಗಳು ಹಾಗು ಪಾಲಿಕೆ ವ್ಯಾಪ್ತಿಗೆ ಸೇರ್ಪಡೆಯಾದ ಹಳ್ಳಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಅವಶ್ಯವಿರುವ ವಿವಿಧ ಕಾಮಗಾರಿಗಳಿಗೆ ಟೆಂಡರ್ ಕರೆಯಲು ಪಾಲಿಕೆ ಸಾಮಾನ್ಯ ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿಗೆ ಪಡೆಯಲಾಯಿತು.

ಮಹಾನಗರ ಪಾಲಿಕೆ ಕುವೆಂಪು ಸಭಾಂಗಣದಲ್ಲಿ ಗುರುವಾರ ಮೇಯರ್ ಆಗಿ ಮೊದಲ ಬಾರಿಗೆ ಸಾಮಾನ್ಯ ಸಭೆ ನಡೆಸಿ ಮಾತನಾಡಿದ ಗಿರೀಶ್ ಚನ್ನವೀರಪ್ಪ ಅವರು, ನಗರದ 35 ವಾರ್ಡ್‌ಗಳನ್ನೂ ನನ್ನ ವಾರ್ಡ್‌ಗಳೆಂದೇ ಭಾವಿಸಿ, ಆಗಬೇಕಿರುವ ಕಾಮಗಾರಿಗಳಿಗೆ ಟೆಂಡರ್ ಕರೆಯಲು ವಿಷಯವನ್ನು ಸಾಮಾನ್ಯ ಸಭೆಯಲ್ಲಿ ಮಂಡಿಸಿದ್ದೇನೆ. ನಗರದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅನುದಾನ ಹಂಚಿಕೆ ಮಾಡುವುದಾಗಿ ಭರವಸೆ ನೀಡಿದರು.



### ಜನ ಸತ್ತಮೇಲೆ ಗುಂಡಿ ಮುಚ್ಚಿ

ನಗರದ ತಣ್ಣೀರುಹಳ್ಳದ ಮುಖ್ಯ ವೃತ್ತದಲ್ಲಿ ಎಷ್ಟು ಗುಂಡಿಗಳು ಬಿದ್ದಿದ್ದಾವೆ ಗೊತ್ತಾ. ಹಲವು ಬಾರಿ ಹೇಳಿದರೂ ಯಾರೊಬ್ಬರೂ ಸ್ಪಂದಿಸುತ್ತಿಲ್ಲ, ಯಾವಾಗ ಮುಚ್ಚಿಸುತ್ತೀರ ಎಂದು 33ನೇ ವಾರ್ಡ್ ಸದಸ್ಯ ಚಂದ್ರೇಗೌಡ ಅವರು ಪ್ರಶ್ನಿಸಿದರು.

ಆಯುಕ್ತರು, ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದವರಿಗೆ ಹೇಳಿದ್ದೇವೆ, ಅವರು ಮುಚ್ಚಿಸುತ್ತಾ ರೆಂದು ಹೇಳುತ್ತಿದ್ದಂತೆ, ಆಕ್ರೋಶಗೊಂಡ ಸದಸ್ಯ, ಜನರು ಗುಂಡಿಯಲ್ಲಿ ಬಿದ್ದು ಸತ್ತ ಮೇಲೆ ಗುಂಡಿ ಮುಚ್ಚಿಸಿ ಎಂದು ಗುಡುಗಿದರು. ಮಧ್ಯ ಪ್ರವೇಶಿಸಿದ ಮೇಯರ್ ಪಾಲಿಕೆಯಿಂದಲೇ ಕೂಡಲೇ ಗುಂಡಿ ಮುಚ್ಚಿಸುವಂತೆ ಸೂಚಿಸಿದರು.

ಸದಸ್ಯ ಅಶ್ವಿನಿ ಮಹೇಶ್ ಮಾತನಾಡಿ, ಗುಂಡಿಗಳನ್ನು ಮುಚ್ಚದಿದ್ದರೂ ಅನುದಾನ ಬಿಡುಗಡೆ ಮಾಡಲಾಗಿದೆ. ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳದಿದ್ದರೂ ಹಣ ಬಿಡುಗಡೆ ಮಾಡಲಾಗಿದೆ ಎಂದು ಆರೋಪಿಸಿದರು. ಇಂತಹ ಪ್ರಕರಣಗಳು ದೃಢಪಟ್ಟರೆ ಸಂಬಂಧಿಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳ ಲಾಗುವುದೆಂದು ಮೇಯರ್ ಸ್ಪಷ್ಟಪಡಿಸಿದರು.

### ಸ್ಥಾಯಿ ಸಮಿತಿ ರಚನೆಗೆ ಒತ್ತಾಯ

ಪಾಲಿಕೆಯಲ್ಲಿ ಸ್ಥಾಯಿ ಸಮಿತಿ ರಚಿಸುವಂತೆ ಸದಸ್ಯರಾದ ಸಂತೋಷ್, ರಕ್ಷಿತ್, ಮಂಜುನಾಥ್ ಸೇರಿ ಬಹುತೇಕ ಸದಸ್ಯರು ಸಭೆಯಲ್ಲಿ ಒತ್ತಾಯಿಸಿದರು. ಪ್ರತಿಕ್ರಿಯಿಸಿದ ಮೇಯರ್ ಗಿರೀಶ್ ಅವರು, ಸ್ಥಾಯಿ ಸಮಿತಿ ರಚಿಸುವ ಅಧಿಕಾರ ನನಗಿಲ್ಲ. ಪ್ರಾದೇಶಿಕ ಆಯುಕ್ತರು ಚುನಾವಣೆ ನಡೆಸಬೇಕು. ಈ ಬಗ್ಗೆ ಮುಂದಿನ ಸಭೆಯಲ್ಲಿ ನಡವಳಿ ಸೇರಿಸಲಾಗುವುದೆಂದು ತಿಳಿಸಿದರು.

ಈ ವೇಳೆ ಮಧ್ಯ ಪ್ರವೇಶ ಮಾಡಿದ ಜೆಡಿಎಸ್ ಸದಸ್ಯ ಕ್ರಾಂತಿ ಪ್ರಸಾದ್ ಅವರು, ಸದಸ್ಯರ ಅಧಿಕಾರಾವಧಿ ಕೇವಲ ಒಂದು ತಿಂಗಳು ಮಾತ್ರ ಇರುವುದರಿಂದ, ಅಧಿಕಾರಕ್ಕಾಗಿ ಸಮಿತಿ ಏಕೆ. ಚುನಾವಣೆ ಪ್ರಕ್ರಿಯೆ ಒಂದು ತಿಂಗಳ ಕಾಲ ನಡೆಯುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ವೇಳೆ ವಿರೋಧ ವ್ಯಕ್ತಪಡಿಸಿದ ಬಿಜೆಪಿ ಸದಸ್ಯರು, ಅಧಿಕಾರ ಎಲ್ಲರಿಗೂ ಹಂಚಿಕೆಯಾಗಬೇಕು. ಸದಸ್ಯರ ಆಡಳಿತ ಅವಧಿ ವಿಸ್ತರಣೆಗೆ ನ್ಯಾಯಾಲಯದ ಮೊರೆ ಹೋಗಿದ್ದು 6 ಅಥವಾ ಒಂದು ವರ್ಷದವರೆಗೂ ಸದಸ್ಯರ ಅವಧಿ ವಿಸ್ತರಣೆಯಾಗುವ ಸಾಧ್ಯತೆ ಇದೆ. ಆದ್ದರಿಂದ ಸಮಿತಿ ರಚನೆಯಿಂದ ಅನುಕೂಲವಾಗಲಿದೆ ಎಂದು ಹೇಳಿದರು. ಸಮ್ಮತಿ ಸೂಚಿಸಿದ ಮೇಯರ್, ಮುಂದಿನ ಸಭೆಯಲ್ಲಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಯಾವುದೇ ಟೆಂಡರ್ ಕರೆದರೂ ಈ ಬಗ್ಗೆ ಮಾಹಿತಿಯನ್ನು ಎಲ್ಲಾ ಸದಸ್ಯರ ಗಮನಕ್ಕೆ ತರಲಾಗುವುದು. ಹಿಂದಿನ ಹಾಗೆ ವಾಟ್ಸಪ್‌ನಲ್ಲಿ ಹಾಕಿ ಸುಮ್ಮನಾಗುವುದಿಲ್ಲ. ಪಾರದರ್ಶಕ ಆಡಳಿತಕ್ಕೆ ಒತ್ತು ನೀಡಲಾಗುವುದು. ಕಾಮಗಾರಿಯಲ್ಲಿ ಲೋಪವಿದ್ದರೆ ಸದಸ್ಯರು ಲಿಖಿತ ರೂಪದಲ್ಲಿ ದೂರು ಸಲ್ಲಿಸಿದರೆ ಕೂಡಲೇ ಕ್ರಮ ಕೈಗೊಳ್ಳಲಾಗುವುದು. ಆ ಕಾಮಗಾರಿ ಬಿಲ್ ತಡೆ ಹಿಡಿಯಲಾಗುವುದು. ಬಹುತೇಕ ಸದಸ್ಯರು ಸಭೆಗಳಲ್ಲಿ » ನಾಲ್ಕನೇ ಪುಟದಲ್ಲಿ

# ಅಂತರಂಗದ ಭಾವನೆ ಬರಹ ರೂಪಕ್ಕೆ ತಂದ ಭೈರಪ್ಪ

• ಪ್ರಜೋದಯ ವರದಿ

**ಹಾಸನ:** ಸಾಹಿತಿ ಡಾ.ಎಸ್.ಎಲ್. ಭೈರಪ್ಪ ಅವರನ್ನು ಬಲಪಂಥೀಯ ಲೇಖಕ ಎಂದು ನೋಡುವ ಬದಲು ಅವರ ಬರವಣಿಗೆಯನ್ನು ಅರ್ಥೈಸಿಕೊಳ್ಳುವ ವ್ಯವಧಾನ ಬೆಳೆಸಿಕೊಳ್ಳಬೇಕು. ಅಂತರಂಗದ ಭಾವನೆಗಳನ್ನು ಅಕ್ಷರ ರೂಪಕ್ಕೆ ತಂದ ಶ್ರೇಷ್ಠ ಸಾಹಿತಿ ಅವರಾಗಿದ್ದರೆಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಎಚ್.ಎಲ್.ಮಲ್ಲೇಶಗೌಡ ಅವರು ಹೇಳಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಗುರುವಾರ ಏರ್ಪಡಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಅವರು, ಅವರ ಪುಸ್ತಕಗಳಲ್ಲಿ ಬಲಪಂಥವಿಲ್ಲ. ಭೈರಪ್ಪ ಅವರು ಅಧ್ಯಯನಶೀಲ ಬರಹಗಾರರು. ಅವರಷ್ಟು ಅಧ್ಯಯನ ಮಾಡಿ ಬರೆದವರನ್ನು ನಾನಂತೂ ಕಂಡಿಲ್ಲ. ನನ್ನ ಬರಹದ ಸತ್ವ ಗ್ರಾಮೀಣ ಬದುಕೆಂಬುದು ಅವರ ನಿಲುವಾಗಿತ್ತು. ಜೀವನದಲ್ಲಿ ಎದುರಾಗುವ ನೋವು, ಸವಾಲುಗಳು ಮನುಷ್ಯನನ್ನು ಗಟ್ಟಿಗೊಳಿಸುತ್ತದೆ ಎಂಬುದಕ್ಕೆ ಅವರೇ ಸಾಕ್ಷಿ ಎಂದರು.



ಐಟಿ-ಬಿಟಿ ಕೆಲಸಗಾರರಿಗೂ ಸಾಹಿತ್ಯದ ಅಭಿರುಚಿ ಬೆಳೆಸಿದವರು ಭೈರಪ್ಪ. ಗೃಹಭಂಗ, ವಂಶವೃಕ್ಷ, ನಾಯಿ ನೆರಳು, ತಬ್ಬಲಿಯು ನೀನಾದೆ ಮಗನೆ, ಅಂಚು, ಸಾಕ್ಷಿ, ದೂರ ಸರಿದರು, ಉತ್ತರಕಾಂಡ, ಯಾನ, ಮಂದ್ರ, ತಂತು ಸೇರಿ ಎಲ್ಲಾ ಕಾದಂಬರಿಗಳು ಒಂದಕ್ಕೊಂದು ಭಿನ್ನವಾಗಿವೆ. ಬರೆದಂತೆ ಬದುಕಿದವರು ಭೈರಪ್ಪ ಎಂದರು.

ಹಾಸನದಲ್ಲಿ ಹಮ್ಮಿಕೊಂಡಿದ್ದ ಹೊಯ್ಸಳ ಸಾಹಿತ್ಯೋತ್ಸವವನ್ನು ಉದ್ಘಾಟಿಸಿ ಎರಡು ದಿನ ಜಿಲ್ಲೆಯಲ್ಲಿ ಇದ್ದಿದ್ದು ಸ್ಮರಣೀಯ. ಅವರನ್ನು ಕಳೆದುಕೊಂಡು ಸಾಹಿತ್ಯ ವಲಯ ನಷ್ಟ ಕಂಡಿದೆ. ಅವರ ಆತ್ಮ ನಿಶ್ಚಿತವಾಗಿ ಶಾಂತವಾಗಿದೆ ಎಂದರು.

» ನಾಲ್ಕನೇ ಪುಟದಲ್ಲಿ

# ಇಂದು ಮೈಸೂರಿನಲ್ಲಿ ಸಾಹಿತಿ ಭೈರಪ್ಪ ಅಂತ್ಯಕ್ರಿಯೆ

• ಪ್ರಜೋದಯ ವರದಿ

**ಬೆಂಗಳೂರು:** ಸಾಹಿತಿ ಡಾ.ಎಸ್.ಎಲ್. ಭೈರಪ್ಪ ಅವರ ಅಂತ್ಯಕ್ರಿಯೆ ಶುಕ್ರವಾರ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಲಿದೆ.

ಬೆಂಗಳೂರಿನಿಂದ ಗುರುವಾರ ಮಧ್ಯಾಹ್ನ ಪಾರ್ಥಿವ ಶರೀರವನ್ನು ಮೈಸೂರಿನ ಕಲಾ ಮಂದಿರದ ಆವರಣದಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗಿತ್ತು. ಬೆಳಿಗ್ಗೆ 11 ಗಂಟೆಗೆ ಕುಟುಂಬದ ಧಾರ್ಮಿಕ ವಿಧಿ ವಿಧಾನದಂತೆ ಅಂತಿಮ ಕ್ರಿಯೆ ನಡೆಸಲು ಸಿದ್ಧತೆ ಕೈಗೊಳ್ಳಲಾಗಿದೆ.

**ಮೈಸೂರಿನಲ್ಲಿ ಸ್ಮಾರಕ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಪದ್ಮಭೂಷಣ, ಸಾಹಿತಿ ಡಾ.ಎಸ್.ಎಲ್. ಭೈರಪ್ಪ ಅವರ ನಿಧನದಿಂದ ಸಾರಸ್ವತ ಲೋಕ ಬಹಳ ಬಡವಾಗಿದೆ. ಭೈರಪ್ಪನವರ ಸ್ಮಾರಕವನ್ನು ಮೈಸೂರಿನಲ್ಲಿ ನಿರ್ಮಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಿದೆಯೆಂದರು.

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ದಿ||ಎಸ್.ಎಲ್. ಭೈರಪ್ಪನವರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿ ಮಾಧ್ಯಮದವರೊಂದಿಗೆ ಮಾತನಾಡಿ, ಭೈರಪ್ಪನವರ ಕಾದಂಬರಿಗಳು ಜಗತ್ಪ್ರಸಿದ್ಧ. ಅವರ ನಿಧನದಿಂದ ಸಾರಸ್ವತ ಲೋಕ ಬಹಳ ಬಡವಾಗಿದೆ. ಅವರು ಸುಮಾರು 25 ಕಾದಂಬರಿಗಳನ್ನು ಬರೆದಿದ್ದು, ಮೈಸೂರಿನಲ್ಲಿಯೇ ವಿದ್ಯಾಭ್ಯಾಸ ನಡೆಸಿದ ಭೈರಪ್ಪನವರಿಗೆ ಮೈಸೂರು ಕರ್ಮಸ್ಥಳ.



ಅವರ ಕಾದಂಬರಿಗಳು 40 ಭಾಷೆಗಳಿಗೆ ತರ್ಜುಮೆಯಾಗಿದ್ದು, ಇಷ್ಟು ಸಂಖ್ಯೆಯಲ್ಲಿ ಸಾಹಿತಿಯೊಬ್ಬರ ಕೃತಿಗಳು ತರ್ಜುಮೆಯಾಗಿರುವುದು ಅಪರೂಪ. ವಿವಿಧ ಭಾಷೆಗಳ ಓದುಗರನ್ನು ಸಂಪಾದಿಸಿದ್ದರು. ಸಣ್ಣ ಗ್ರಾಮವೊಂದರಲ್ಲಿ ಜನಿಸಿದ ಭೈರಪ್ಪನವರು, ಫಿಲಾಸಫಿಯನ್ನು ಓದಿದ್ದರೂ, ಸಾಹಿತ್ಯ ಕ್ಷೇತ್ರದಲ್ಲಿ ಆಸಕ್ತಿ ಬೆಳೆಸಿಕೊಂಡವರು ಎಂದರು.

ಬೋಧನಾ ವೃತ್ತಿಯಲ್ಲಿದ್ದುಕೊಂಡು ಸಾಹಿತ್ಯ ಕ್ಷೇತ್ರದಲ್ಲಿ ತಮ್ಮನ್ನೂ ತೊಡಗಿಸಿಕೊಂಡಿದ್ದರು. ಕಾದಂಬರಿಗಳನ್ನು ಆತ್ಮತೃಪ್ತಿಗಾಗಿ ಬರೆಯುತ್ತಿದ್ದ ಅವರ ಕೃತಿಗಳು ಜಗತ್ಪ್ರಸಿದ್ಧವಾಗಿದ್ದವು. ನಾನು ಅವರ ಕೆಲವೊಂದು ಕಾದಂಬರಿಗಳನ್ನು ಓದಿದ್ದೇನೆ. ಬದುಕಿನ ಅನುಭವಗಳನ್ನಾಧರಿಸಿ ಬರೆ ಯುವ ಸಾಹಿತಿ. ಅವರ ಆತ್ಮಕ್ಕೆ ಶಾಂತಿ ಕೋರುತ್ತಾ, ಅವರ ಕುಟುಂಬದವರು, ಸಾಹಿತ್ಯಾಭಿಮಾನಿಗಳಿಗೆ ಅವರ ಅಗಲಿಕೆಯ ನೋವನ್ನು ಭರಿಸಲು ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.

ಸಾಹಿತ್ಯ ಹಾಗು ಸ್ನೇಹ ಬೇರೆಯಾಗಿದ್ದು, ನಮ್ಮ ದೃಷ್ಟಿಕೋನಗಳು ಬೇರೆಯಾಗಿದ್ದರೂ, ಉತ್ತಮ ಬಾಂಧವ್ಯವಿತ್ತು. ಭೈರಪ್ಪನವರ ಅಂತ್ಯಕ್ರಿಯೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಭಾಗವಹಿಸಲಿದ್ದಾರೆ. ವಿವಿಧ ಪ್ರಶಸ್ತಿಗಳಿಗೆ ಭಾಜನರಾಗಿರುವ ಭೈರಪ್ಪನವರು ನಾಡು ಕಂಡ ಶ್ರೇಷ್ಠ ಸಾಹಿತಿಗಳಾಗಿದ್ದರು. ಯಾವುದೇ ಪ್ರಶಸ್ತಿಗೂ ಹಂಬಲಿಸದ ಅವರ ಸಾಹಿತ್ಯದ ಕೊಡುಗೆ ಪರಿಗಣಿಸಿ ಜ್ಞಾನಪೀಠಪ್ರಶಸ್ತಿ ನೀಡಿದ್ದರೆ ಉತ್ತಮವಾಗಿತ್ತು ಎಂದರು.

## ಸಾಹಿತಿ ಭೈರಪ್ಪ ನಿಧನಕ್ಕೆ ಶ್ರವಣಬೆಳಗೊಳ ಸ್ವಾಮೀಜಿ ಸಂತಾಪ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಕನ್ನಡ ಸಾರಸ್ವತ ಲೋಕದ ಮೇರು ಸಾಹಿತಿ ಡಾ.ಎಸ್.ಎಲ್.ಭೈರಪ್ಪ ಅವರ ನಿಧನದಿಂದ ಕನ್ನಡ ಸಾಹಿತ್ಯಕ್ಕೆ ಅಪಾರ ನಷ್ಟ ವುಂಟಾಗಿದೆ ಎಂದು ಶ್ರವಣಬೆಳಗೊಳ ಸ್ವಸ್ತಿಶ್ರೀ ಅಭಿನವ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಸ್ವಾಮೀಜಿ ಸಂತಾಪ ಸೂಚಿಸಿದ್ದಾರೆ.



ನಾಡಿನ ಸಾಹಿತ್ಯ ಲೋಕದ ಸಾಕ್ಷಿ ಪ್ರಜ್ಞೆಯಂತಿದ್ದ ಭೈರಪ್ಪ ಅವರು ಸಾಹಿತ್ಯವನ್ನೇ ಉಸಿರಾಗಿಸಿಕೊಂಡು ಬದುಕಿದವರು. ಅವರ ಪ್ರಮುಖ ಕಾದಂಬರಿಗಳಾದ ವಂಶವೃಕ್ಷ, ದಾಟು, ತಂತು, ಪರ್ವ, ಆವರಣ, ಗೃಹಭಂಗ, ಮಂದ್ರ ಮುಂತಾದವುಗಳ ಮೂಲಕ ಕನ್ನಡ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅವರು ಬರವಣಿಗೆಯ ಮೂಲಕ ಕನ್ನಡ ಸಾಹಿತ್ಯವನ್ನು ಸಮೃದ್ಧಿಗೊಳಿಸಿದ್ದರು. ಅವರ ಬರಹಗಳು ಸಮಾಜದ ಕುರಿತು ಚಿಂತಿಸಲು ಪ್ರೇರಣೆ ನೀಡಿದ್ದವು. ಇತಿಹಾಸ ಹಾಗು ಸಂಸ್ಕೃತಿಯ ಕುರಿತು ಅವರಿಗಿದ್ದ ಒಲವು ಮುಂದಿನ ತಲೆಮಾರಿಗೂ ಮಾದರಿಯಾಗಲಿದೆ. ಅವರು ತಮ್ಮ ಕಾದಂಬರಿಗಳಿಂದ ಬೃಹತ್ ಓದುಗ ವರ್ಗವನ್ನೇ ಸೃಷ್ಟಿಸಿಕೊಂಡಿದ್ದರು. ಹಿಂದಿ, ಇಂಗ್ಲೀಷ್ ಸೇರಿ ಭಾರತೀಯ ಇತರ ಭಾಷೆಗಳಿಗೆ ಕಾದಂಬರಿಗಳು ಅನುವಾದಗೊಂಡು ಸಾಕಷ್ಟು ಪ್ರಸಿದ್ಧಿ ಪಡೆದಿದ್ದವು ಎಂದಿದ್ದಾರೆ.

ಭೈರಪ್ಪನವರು ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಅವರೊಂದಿಗೆ ಅವಿನಾಭಾವ ಒಡನಾಟ ಹೊಂದಿದ್ದರು. ಶ್ರೀಕ್ಷೇತ್ರದ ವತಿಯಿಂದ ಸನ್ಮಾನಿಸಿ, ಅಭಿನಂದನೆ ಸಲ್ಲಿಸಿದ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಭೈರಪ್ಪ ಅವರು, ನನ್ನ ಪ್ರತಿಯೊಂದು ಕಾದಂಬರಿಗಳಲ್ಲೂ ಜೀವನ ಮೌಲ್ಯಗಳನ್ನು ಬಿಡಿ ಬಿಡಿಯಾಗಿ ಪರಿಶೋಧನೆ ಮಾಡುವ ಕ್ರಮವಾಗಿದ್ದು, ಮೂಲಭೂತವಾದ ಅಹಿಂಸೆ ಹಾಗು ಇತರ ಮೌಲ್ಯಗಳ ಶೋಧನೆಗೆ ಪ್ರಯತ್ನ ಮಾಡಿದ್ದೇನೆ. ಅದಕ್ಕೆ ಜೈನ ಧರ್ಮದ ಸಿದ್ಧಾಂತಗಳು ಸಹಕಾರಿಯಾಗಿವೆ ಎಂದಿದ್ದರು.

ಡಾ.ಎಸ್.ಎಲ್.ಭೈರಪ್ಪನವರು ಸಾಹಿತಿಯಾಗಿ ನಾಡಿನಲ್ಲಷ್ಟೇ ಅಲ್ಲದೇ ವಿಶ್ವದಾದ್ಯಂತ ಲಕ್ಷಾಂತರ ಅಭಿಮಾನಿಗಳನ್ನು ಹೊಂದಿದ್ದಾರೆ. ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಭಗ ವಂತ ಅವರ ಕುಟುಂಬದವರಿಗೆ ಕರುಣಿಸಲಿ ಹಾಗು ಹಿರಿಯ ಜೀವಕ್ಕೆ ಚಿರಶಾಂತಿಯನ್ನು ನೀಡ ಲೆಂದು ಭಗವಾನ್ ಶ್ರೀ ಬಾಹುಬಲಿ ಸ್ವಾಮಿಯವ ರಲ್ಲಿ ಪ್ರಾರ್ಥಿಸುತ್ತೇನೆಂದು ಶೋಕ ವ್ಯಕ್ತಪಡಿಸಿದ್ದಾರೆ.

## ಬೆಂಗಳೂರು-ಮೈಸೂರಿನಿಂದ ವಿಶೇಷ ಬಸ್ | ಮಾರ್ಗದರ್ಶಿಗಳ ನಿಯೋಜನೆ

# ಹಾಸನಾಂಬ ಭಕ್ತರಿಗೆ ಈ ವರ್ಷವೂ ಪ್ರವಾಸ ಭಾಗ್ಯ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ದಿನಗಣನೆ ಶುರುವಾಗಿದ್ದು, ಈ ವರ್ಷವೂ ಪ್ರವಾಸೋದ್ಯಮ ಇಲಾಖೆ ಟೂರ್ ಪ್ಯಾಕೇಜ್ ಕೈಗೆತ್ತಿಕೊಂಡಿದೆ. ಹಾಸನ ಮಾತ್ರವಲ್ಲದೆ ಬೆಂಗಳೂರು, ಮೈಸೂರಿನಿಂದಲೂ ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಿಕೊಂಡಿದೆ. ಅ.9 ರಿಂದ ಅ.23ರ ವರೆಗೆ ಪ್ರವಾಸಿ ಬಸ್‌ಗಳು ಸಂಚರಿಸಲಿವೆ.

ಹಲವು ವರ್ಷಗಳಿಂದ ಹಾಸನಾಂಬ ಜಾತ್ರೆಗೆ ಬರುವ ಭಕ್ತರಿಗೆ ಜಿಲ್ಲೆಯ ವಿವಿಧ ಪ್ರವಾಸಿ ಸ್ಥಳಗಳ ವೀಕ್ಷಣೆಗೆ ವ್ಯವಸ್ಥೆ ಮಾಡಿಕೊಡಲಾಗುತ್ತದೆ. ಈ ಬಾರಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯು ರಾಜಧಾನಿ ಬೆಂಗಳೂರು ಮತ್ತು ಸಾಂಸ್ಕೃತಿಕ ನಗರಿ ಮೈಸೂರಿನ ಸಾರ್ವಜನಿಕರಿಗೆ ವ್ಯವಸ್ಥೆ ಕಲ್ಪಿಸಿದೆ. ಬೆಂಗಳೂರಿನಿಂದ ಬರುವ ಪ್ರವಾಸಿಗರಿಗೆ 1 ಸಾವಿರ ರೂ. ದರ್ಶನ ಟಿಕೆಟ್ ಒಳಗೊಂಡಿದ್ದು, ಒಬ್ಬರಿಗೆ 2,500 ರೂ., ಮೈಸೂರಿನಿಂದ ಬರುವ ಸಾರ್ವಜನಿಕರಿಗೆ ದರ್ಶನ ಟಿಕೆಟ್‌ನೊಂದಿಗೆ 2,200 ರೂ. ನಿಗದಿ ಮಾಡಲಾಗಿದೆ.




ಹಾಸನಾಂಬ ದರ್ಶನದ ಬಳಿಕ ಸಪ್ತಮಾತೃಕೆಯರ ದರ್ಶನಕ್ಕೂ ಕರೆದೊಯ್ಯಲಾಗುತ್ತದೆ. ಹಾಸನದ ದೇವಿಗೆರೆ ಕಲ್ಯಾಣಿ, ಆಲೂರು ತಾಲ್ಲೂಕಿನ ಕೆಂಚಮ್ಮನ ಹೊಸಕೋಟೆ, ಮೊಸಳೆ ಗ್ರಾಮದ ನಾಗೇಶ್ವರ ಮತ್ತು ಚನ್ನಕೇಶವ ದೇವಾಲಯ ದರ್ಶನ ಭಾಗ್ಯ ಕರುಣಿಸಲಾಗುತ್ತಿದೆ. ಬೆಳಿಗ್ಗೆ 6 ಗಂಟೆಗೆ ಬೆಂಗಳೂರು ಹಾಗು ಮೈಸೂರಿನಿಂದ ಹೊರಡುವ ವೋಲ್ವೊ ಬಸ್ ಬೆಳಿಗ್ಗೆ 10 ಗಂಟೆಗೆ ಹಾಸನಾಂಬ ದೇವಸ್ಥಾನಕ್ಕೆ ಬರಲಿವೆ. ದೇವಿ ದರ್ಶನ ಬಳಿಕ ಉಳಿದ ಪ್ರವಾಸಿ ಸ್ಥಳಗಳಿಗೆ ಕರೆದು ಕೊಂಡು ಹೋಗಲಾಗುತ್ತದೆ. ಉಪಹಾರ ಹಾಗು ಊಟದ ಖರ್ಚು ಪ್ರಯಾಣಿಕರದ್ದೇ ಆಗಿರುತ್ತದೆ.

> ಪ್ರತಿ ವರ್ಷದಂತೆ ಈ ವರ್ಷವೂ ಟೂರ್ ಪ್ಯಾಕೇಜ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಮೈಸೂರು, ಬೆಂಗಳೂರಿನಿಂದಲೂ ಪ್ರವಾಸೋದ್ಯಮ ಇಲಾಖೆಯಿಂದ ಬಸ್‌ಗಳ ವ್ಯವಸ್ಥೆ ಆಗಿದ್ದು, ಕೆಎಸ್‌ಆರ್‌ಟಿಸಿ ಅಧಿಕಾರಿಗಳು ದರ ಪಟ್ಟಿಯನ್ನು ತಾತ್ಕಾಲಿಕವಾಗಿ ನೀಡಿದ್ದಾರೆ. ಅದರಲ್ಲಿ ಏರಿಳಿತ ಆಗಬಹುದು. ಅಂತಿಮ ಹಂತದ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.
> -ಅರುಣ್ ಕುಮಾರ್ ಸಂಗಾವಿ, ಪ್ರವಾಸೋದ್ಯಮ ಇಲಾಖೆ ಪ್ರಭಾರ ಉಪನಿರ್ದೇಶಕ

**ಸ್ಥಳೀಯವಾಗಿ 7 ಪ್ಯಾಕೇಜ್**


ಬೆಂಗಳೂರು, ಮೈಸೂರಿನಿಂದ ನಿಗದಿಪಡಿಸಿರುವ ಪ್ಯಾಕೇಜ್ ಹೊರತು ಪಡಿಸಿ ಸ್ಥಳೀಯವಾಗಿ ಏಳು ಮಾರ್ಗದಲ್ಲಿ ಪ್ರವಾಸ ಕೈಗೊಳ್ಳಲಾಗಿದೆ. ಪ್ರತಿ ದಿನ ಬೆಳಿಗ್ಗೆ 7 ಗಂಟೆಗೆ ನಗರ ಬಸ್ ನಿಲ್ದಾಣದಿಂದ ಹೊರಡುವ ಬಸ್‌ಗಳು ಪ್ರೇಕ್ಷಣೀಯ ಸ್ಥಳಗಳು ಹಾಗು ದೇವಸ್ಥಾನಗಳಿಗೆ ಭೇಟಿ ನೀಡಿ ಸಂಜೆ 5 ಗಂಟೆಗೆ ನಗರ ಬಸ್ ನಿಲ್ದಾಣಕ್ಕೆ ಬರಲಿವೆ. ಪ್ರವಾಸಿಗರಿಗೆ ಸ್ಥಳ ಮಾಹಿತಿ ನೀಡಲು ಮಾರ್ಗದರ್ಶಿಗಳು ಹಾಗು ಸಹಾಯಕರಾಗಿ ಆಶಾ ಕಾರ್ಯಕರ್ತರನ್ನು ನಿಯೋಜನೆ ಮಾಡಲಾಗುತ್ತಿದೆ.

**ಪ್ಯಾಕೇಜ್ 1ರ ವಿವರ**

ಹಾಸನದಿಂದ ವಾಟೆಹೊಳೆ ಜಲಾಶಯ, ಆಲೂರು ತಾಲ್ಲೂಕು » ನಾಲ್ಕನೇ ಪುಟದಲ್ಲಿ

C M Y K C M Y K C M Y K

# ಭೈರಪ್ಪ ಅಗಲಿಕೆ: ಭಾವತಂತು ತುಂಡಾದ ಅನುಭವ



ಆವರಣ ಕಾದಂಬರಿ ಬರೆಯುವುದಕ್ಕೆ ಮುಂಚಿತವಾಗಿ ಎಸ್.ಎಲ್. ಭೈರಪ್ಪನವರು ಹಾಸನದಲ್ಲಿ ಒಂದು ಸಾಹಿತ್ಯಕ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಲುವಾಗಿ ಆಗಮಿಸಿದ್ದರು. ನಾನು ಕಾರ್ಯಕ್ರಮಕ್ಕೆ ತಡವಾಗಿ ಹೋದೆ, ಆಗ ಅಲ್ಲಿದ್ದ ಕೆಲವರು ಭೈರಪ್ಪನವರು ನನ್ನ ಬಗ್ಗೆ ಒಂದೆರಡು ಸಾರಿ ವಿಚಾರಿಸಿದರು ಎಂದು ಸಂದೇಶವನ್ನು ಕೊಟ್ಟರು. ಕಾರ್ಯಕ್ರಮ ಮುಗಿದ ನಂತರ ನಾನು ಅವರನ್ನು ಸಂಪರ್ಕಿಸಿದೆ. ಆಗ ಅವರು ನಾನು ನಿಮ್ಮ ಮನೆಗೆ ಬರಬೇಕೆಂದಿದ್ದೇನೆ ಎಂದು ಹೇಳಿದರು. ನಾನು ಬನ್ನಿ ಎಂದು ಕರೆದೆ. ಈಗಲೇ ಬರುವುದಿಲ್ಲ ಆದರೆ ನಾನು ಒಂದು ವಾರದ ಮಟ್ಟಿಗೆ ಬಂದು ನಿಮ್ಮ ಮನೆಯಲ್ಲಿಯೇ ಉಳಿಯುತ್ತೇನೆಂದರು. ನನಗೆ ಗಲಿಬಿಲಿಯಾದದ್ದಂತೂ ನಿಜ. ನಂತರ ನಾನು ಆ ವಿಷಯವನ್ನು ಮರೆತುಬಿಟ್ಟೆ.

ಸುಮಾರು ಒಂದು ತಿಂಗಳ ನಂತರ ನನ್ನ ಲ್ಯಾಂಡ್‌ಲೈನ್‌ಗೆ ಒಂದು ಫೋನ್ ಬಂದಿತ್ತು. ಭೈರಪ್ಪನವರು ಫೋನ್ ಮಾಡಿದ್ದರು ಮತ್ತು ತಾವು ಇಂತಹ ದಿನ ಬರುವುದಾಗಿ ನನಗೆ ಮಾಹಿತಿ ನೀಡಿದರು. ನನಗೆ ಸಿಕ್ಕಾಪಟ್ಟೆ ಗಾಬರಿಯಾಯಿತು. ಅವರಿಗಾಗಿ ನಾನು ಯಾವ ವ್ಯವಸ್ಥೆಯನ್ನು ಮಾಡಬೇಕು ಎಂಬುದೇ ನನಗೆ ತೋಚದಂತಾಯಿತು. ಆಗ ನನ್ನ ಮೂವರು ಹೆಣ್ಣು ಮಕ್ಕಳು ಕೂಡ ಅವಿವಾಹಿತರಾಗಿದ್ದರು ಮತ್ತು ವಿದ್ಯಾಭ್ಯಾಸದಲ್ಲಿ ತೊಡಗಿದ್ದರು. ಮಗ ತಾಹೇರ್ ಹೈಸ್ಕೂಲಿನಲ್ಲಿ ಓದುತ್ತಿದ್ದ. ಹಿರಿಯವಳಾದ ಸಮೀನಾ ಮೈಸೂರು ಯುನಿವರ್ಸಿಟಿಯಲ್ಲಿ ಚಿನ್ನದ ಪದಕವನ್ನು ಪಡೆದಿದ್ದಳು. ನಂತರ ಏಕಕಾಲದಲ್ಲಿ ಐಎಎಸ್ ಮತ್ತು ಕೆಎಎಸ್ ಪರೀಕ್ಷೆಗಳಿಗೆ ಸಿದ್ಧತೆ ನಡೆಸಿದ್ದಳು. ಮಕ್ಕಳೆಲ್ಲಾ ಮನೆಯಲ್ಲಿಯೇ ಇದ್ದುದರಿಂದ ಮನೆಯೆಲ್ಲ ಗಲಗಲ ಎನಿಸುತ್ತಿತ್ತು. ಆದರೆ ನನಗೆ ಆತಂಕವಾಗಿದ್ದು ಅವರಿಗಾಗಿ ನಾನು ಉಪಚಾರದ ವ್ಯವಸ್ಥೆಯನ್ನು ಹೇಗೆ ಮಾಡಬೇಕು ಎಂದು. ಹೀಗಾಗಿ ನಾನು ಅವರನ್ನೇ ಕೇಳುವುದು ಉತ್ತಮ ಎಂದು ಭಾವಿಸಿ ಮತ್ತೆ ನಾನೇ ಅವರಿಗೆ ಫೋನ್ ಮಾಡಿ ಅವರಿಗಾಗಿ ನಾನು ಏನು ವ್ಯವಸ್ಥೆಯನ್ನು ಮಾಡಬೇಕು ಎಂದು ಕೇಳಿದೆ. ಅದಕ್ಕೆ ಅವರು ಬಹಳ ಸರಳವಾಗಿ ತಾವು ನಾನ್ ವೆಜ್ ಆಹಾರ ಅಭ್ಯಾಸಕ್ಕೆ ಒಗ್ಗಿಕೊಂಡಿಲ್ಲ ಎಂದು ತಿಳಿಸಿ ವೆಜಿಟೇರಿಯನ್ ಮನೆ ಊಟವನ್ನು ತಮಗೆ ಮಾಡಬಹುದು ಎಂದು ತಿಳಿಸಿದರು. ನಮ್ಮ ಮನೆಯಲ್ಲಿ ನಮ್ಮ ಜೊತೆಯಲ್ಲೇ ಅಡುಗೆ ಮನೆಯ ಊಟವನ್ನೇ ತಾವು ಕೂಡ ಸೇವಿಸುವುದಾಗಿ ನನಗೆ ಸಮಾಧಾನದಿಂದ ಉತ್ತರಿಸಿದರು. ಹೀಗಾಗಿ ಅವರು ಬರುವುದಕ್ಕೆ ಒಂದು ವಾರ ಮುಂಚಿತವಾಗಿಯೇ ನಾನು ನನ್ನ ಫ್ರಿಜ್ ಅನ್ನು ಖಾಲಿ ಮಾಡಿದೆ. ಹಾಸನದ ನಳನಳಿಸುವ ತಾಜಾ ತರಕಾರಿಗಳಿಂದ ತುಂಬಿಸಿದೆ. ಮೀನು ಚಿಕನ್ ಮತ್ತು ಮಟನ್ ಅನ್ನು ಫ್ರಿಜ್‌ನಿಂದ ಹೊರ ತೆಗೆದೆ. ಆದರೆ ಅದಕ್ಕೆ ಎಲ್ಲರಿಗಿಂತ ಹೆಚ್ಚು ತಕರಾರು ತೆಗೆದವನೇ ಮಗ. ಏಕೆಂದರೆ ಮೂರು ಹೊತ್ತು ಕೂಡ ನಾನ್ ವೆಜ್ ತಿನ್ನುತ್ತಿದ್ದ ಅವನಿಗೆ 15 ದಿನಗಳ ಕಾಲ ಅವನ ಆಯ್ಕೆಯ ಆಹಾರ ಸಿಗುವುದಿಲ್ಲ ಎಂಬುದು ಅವನಿಗೆ ಇಷ್ಟವಾಗಲಿಲ್ಲ, ಎಲ್ಲಾ ರೀತಿಯ ಕ್ಯಾತೆ ತೆಗೆದು ಅವು ಯಾವುವು ಕೂಡ ನಡೆಯೋದಿಲ್ಲ ಎಂದು ಅವನಿಗೆ ಅರಿವಾದ ನಂತರ ಅವರ ಸಾಹಿತ್ಯದ ಬಗ್ಗೆ ತಕರಾರು ತೆಗೆದ. ಅಂದರೆ ನನ್ನ ಮತ್ತು ಅವನ ನಡುವೆ ಭೈರಪ್ಪನವರ ಬರವಣಿಗೆಯ ಬಗ್ಗೆ ಸಾಕಷ್ಟು ಚರ್ಚೆ ನಡೆಯಿತು. ಅವನ ಅಕ್ಕಂದಿರು ಕೂಡ ನಡುನಡುವೆ ಮೂಗು ತೂರಿಸಿದರು. ಅವನ ಅಬ್ಜೆಕ್ಷನ್ ಅನ್ನು ಸರ್ವಾನುಮತದಿಂದ ತಳ್ಳಿಹಾಕಿ ವೋಟಿಂಗ್ ಹಾಕದೆಯೂ ಬಹುಮತದಿಂದ ಕರಾವು ಪಾಸಾಗಿ ಭೈರಪ್ಪನವರ ಆತಿಥ್ಯವನ್ನು ನಿರ್ವಹಿಸಲು ಎಲ್ಲರೂ ತಯಾರಾದರು. ತಾಹೇರ್ ಒಂದು ವಾರದ ಮಟ್ಟಿಗೆ ತನ್ನ ಅಜ್ಜಿಯ ಮನೆಗೆ ಅಂದರೆ ನನ್ನ ತಾಯಿಯ ಮನೆಗೆ ಶಿಫ್ಟ್ ಆಗುವುದಾಗಿ ಹೇಳಿ ನನ್ನನ್ನು ಬೆದರಿಸಲು ಪ್ರಯತ್ನ ಪಟ್ಟ. ಸಮೀನಾ ಅವನ ಬ್ಯಾಗ್ ಪ್ಯಾಕ್ ಮಾಡಿದಳು, ಲುಬ್ನಾ ಅವನ ಪುಸ್ತಕಗಳನ್ನು ರೆಡಿ ಮಾಡಿಕೊಟ್ಟಳು. ಆಯಶ ಕಿಕಿ ಎಂದು ನಗುತ್ತಾ ಅವನನ್ನು ಕಿಚಾಯಿಸಿದಳು. ಕೊನೆಗೂ ಅವನು ತನ್ನ ಅಬ್ಜೆಕ್ಷನ್ನು ಮತ್ತು ಬೆದರಿಕೆಗಳನ್ನು ಹಿಂಪಡೆದು ವಿಧೇಯ ಮಗನಂತೆ ಭೈರಪ್ಪನವರ ಆಗಮನವನ್ನು ಎದುರು ನೋಡತೊಡಗಿದ.

ಭೈರಪ್ಪನವರು ನಮ್ಮ ಮನೆಗೆ ಬಂದರು. ಆರಂಭದ ಕೆಲವು ಮುಜುಗರಗಳನ್ನು ಬಿಟ್ಟರೆ ನನಗೆ ಹೆಚ್ಚಿನ ಸಂಕೋಚಗಳೇನು ಆಗಲಿಲ್ಲ. ನನ್ನ ಅಡುಗೆಯ ಸಹಾಯಕ್ಕೆ ಶಬಾನ ಸಸ್ಯಹಾರಿ ಅಡುಗೆಯನ್ನೇ ಮಾಡಲು ಸಂತೋಷವಾಗಿ ಒಪ್ಪಿಕೊಂಡಳು. ಭೈರಪ್ಪನವರು ಕೂಡ ತಾವು ಬರೆಯಲಿರುವ ಕಾದಂಬರಿ ಒಂದಕ್ಕೆ ಹಿನ್ನೆಲೆಯಾಗಿ ಮಾಹಿತಿ ಸಂಗ್ರಹಣ ಮಾಡುವ ಸಲುವಾಗಿ ನಮ್ಮ ಮನೆಗೆ ಬಂದಿರುವುದಾಗಿ ಹೇಳಿದರು. ಮುಸ್ಲಿಂ ಸಾಂಸ್ಕೃತಿಕ ಹಿನ್ನೆಲೆಯ ಮನೆಯ ವಾತಾವರಣವನ್ನು ತಾವು ಅಭ್ಯಸಿಸಬೇಕಾಗಿದೆ ಎಂತಲೂ ಮತ್ತು ಮುಸ್ಲಿಂ ಕುಟುಂಬದ ನಡವಳಿಕೆಗಳನ್ನು ಕೂಡ ತಾವು ಅವಲೋಕಿಸಬೇಕಾಗಿದೆ ಎಂತಲೂ ಆ ಕಾರಣಕ್ಕೆ ನಮ್ಮ ಮನೆಗೆ ಬಂದಿರುವುದಾಗಿಯೂ ಅವರು ಹೇಳಿದರು. ನಾನು ನಕ್ಕು ಬಿಟ್ಟೆ ಮತ್ತು ಅಂತಹ ವಾತಾವರಣ ನಮ್ಮ ಮನೆಯಲ್ಲಿ ಅವರಿಗೆ ಸಿಗುವುದಿಲ್ಲವೆಂತಲೂ ಮತ್ತು ಅಂತಹ ಮತ್ತು ನೈಜ ವಾತಾವರಣದ ಅಗತ್ಯ ಅವರಿಗೆ ಇದ್ದಲ್ಲಿ ಅಂತಹ ಮನೆಗಳಲ್ಲಿ ಭೈರಪ್ಪನವರನ್ನು ಸ್ವಾಗತಿಸುವುದಿಲ್ಲವೆಂತಲೂ ನಾನು ಅವರಿಗೆ ಹೇಳಿದೆ. ಹೀಗಾಗಿ ಅವರು ನಮ್ಮ ಮನೆಯಲ್ಲಿ ಉಳಿಯುವುದಾಗಿ ನಿರ್ಧರಿಸಿದರು.

ಶಬಾನಾಳ ಅಡುಗೆ ಅವರಿಗೆ ಇಷ್ಟವಾಯಿತು. ತರಕಾರಿ ಪಲ್ಯ ಸೊಪ್ಪಿನ ಸಾರು ಕೂಡ ವಿಶೇಷವಾಗಿ ಇಷ್ಟವಾಯಿತು. ಮಾರನೇ ದಿನ ನನಗೆ ಆಲೂರು ಸಾಹಿತ್ಯ ಸಮ್ಮೇಳನದಲ್ಲಿ ಒಂದು ಮುಖ್ಯವಾದ ಕಾರ್ಯಕ್ರಮವಿತ್ತು. ಆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮರಳಿ ಬಂದ ನಾನು ಬರುವಾಗಲೇ ಜ್ವರವನ್ನು ಹೊತ್ತು ತಂದೆ. ಹೀಗಾಗಿ ನಾನು ಜ್ವರದಿಂದ ನರಳುತ್ತಾ ಮಲಗಿರುವಾಗ ಸಮೀನಾಳೆ ಭೈರಪ್ಪನವರ ದೇಖು ರೇಕುಗಳನ್ನು ನೋಡತೊಡಗಿದಳು.

ಭೈರಪ್ಪನವರಿಗೆ ಮುಚ್ಚೆ ಮರ ಖಬರ ಸ್ಥಾನವನ್ನು ಹಾಗೂ ಮಸೀದಿಯನ್ನು ನೋಡಬೇಕಿತ್ತು ಎಂದು ಕೇಳಿದರು. ಒಂದು ದಿನ ಬೆಳಗಿನ ಹೊತ್ತು ಮುಷ್ತಾಕ್ ಭೈರಪ್ಪನವರನ್ನು ಖಬ್ರಸ್ತಾನಿಗೆ ಕರೆದುಕೊಂಡು ಹೋದರು. ಭೈರಪ್ಪನವರು ಹೊರಗಿನಿಂದ ಖಬ್ರಸ್ತಾನವನ್ನು ನೋಡಿದರೂ ಮತ್ತು ಒಳಗಡೆ ಕೂಡ ಗೋರಿಗಳ ನಡುವಿನಿಂದ ಹಾದು ಹೋಗಿ ಮೂಲೆ ಮೂಲೆಯಲ್ಲೂ ಸಂಚರಿಸಿ ಬಂದರು. ಆಮೇಲೆ ಅವರು ಮುಷ್ತಾಕ್ ಅನ್ನು ಇಲ್ಲಿ ಗೋರಿಗಳ ತಲದಸೆಯಲ್ಲಿ ಗ್ರನೆಟಿನ ಕಲ್ಲುಗಳನ್ನು ನಿಲ್ಲಿಸಿದ್ದಾರಲ್ಲ ಅದನ್ನು ಉರ್ದುವಿನಲ್ಲಿ ಏಕೆ ಬರೆದಿದ್ದಾರೆ ಎಂದು ಕೇಳಿದರು. ಅದಕ್ಕೆ ಮುಷ್ತಾಕ್ ತಬ್ಬಿಬ್ಬಾಗಿ ಹೋದರು. ಅದಕ್ಕೆ ಏನು ಉತ್ತರಿಸಬೇಕು ಎಂಬುದು ಅವರಿಗೆ ಗೊತ್ತಾಗಲಿಲ್ಲ. ಹೀಗಾಗಿ ಅವರು ಮನೆಗೆ ಮರಳಿ ಬಂದ ನಂತರ ನನಗೆ ಭೈರಪ್ಪನವರ ಪ್ರಶ್ನೆಯನ್ನು ಒಪ್ಪಿಸಿದ ಮುಷ್ತಾಕ್ ಅದಕ್ಕೆ ನೀವೇ ಉತ್ತರ ಹೇಳಿಎಂದು ಜವಾಬ್ದಾರಿಯನ್ನು ನನ್ನ ಮೇಲೆ ಹೊರಿಸಿದರು. ಭೈರಪ್ಪನವರು ಹಬ್ಬದ ಸನ್ನಿವೇಶಗಳನ್ನು ತಮ್ಮ ನೋಟ್‌ಬುಕ್‌ನಲ್ಲಿ ಬರೆದುಕೊಳ್ಳುತ್ತಿದ್ದರು ಎಂದು ತಿಳಿಸಿದರು.


ಆ ಮೇಲೆ ಭೈರಪ್ಪನವರು ಮಸೀದಿಗೆ ಭೇಟಿ ಕೊಡಬೇಕು ಎಂದು ಕೇಳಿದ ಮೇರೆಗೆ ಮುಷ್ತಾಕ್ ಮತ್ತೆ ಹಾಸನದ ಹೊಳೆನರಸೀಪುರ ರಸ್ತೆಯಲ್ಲಿನ ಮಸೀದಿಯ ಆಡಳಿತ ಮಂಡಳಿಯವರಲ್ಲಿ ವಿಷಯ ತಿಳಿಸಿದ ಮೇರೆಗೆ ಸದರಿಯವರು ಒಪ್ಪಿದರು. ಮುಷ್ತಾಕ್ ಮತ್ತು ಭೈರಪ್ಪನವರು ಒಂದು ಸಾರಿ ನಮಾಜಿನ ಟೈಮಲ್ಲಿ ಆ ಮಸೀದಿಗೆ ಹೋದರು. ಅಲ್ಲಿ ಮಹಿಳೆಯರಿಗೆ ನಮಾಜ್ ಮಾಡಲು ಅವಕಾಶವಿತ್ತು. ಅವರಿಗಾಗಿ ಪ್ರತ್ಯೇಕ ಹಾಲಲ್ಲಿ ನಮಾಜ್‌ಗಾಗಿಯೇ ವ್ಯವಸ್ಥೆ ಮಾಡಿದ್ದರು. ಅದೇ ನಾನು ಆಗ ಶುಕ್ರವಾರ ಮಧ್ಯಾಹ್ನ ಮಾತ್ರ ಆ ಮಸೀದಿಯಲ್ಲಿ ನಮಾಜ್‌ನ ಸಲುವಾಗಿ ಹೋಗುತ್ತಿದ್ದೆ. ಆದುದರಿಂದ ಮುಷ್ತಾಕ್ ನವರು ತಮ್ಮ ಜೊತೆಯಲ್ಲಿ ಕರೆದುಕೊಂಡು ಆ ಮಸೀದಿಗೆ ಹೋದರು. ಭೈರಪ್ಪನವರು ಕೈಕಾಲು ತೊಳೆದು ಮಸೀದಿಯೊಳಗೆ ಹೋಗಿ ನಮಾಜ್ ಮಾಡುತ್ತಿದ್ದಾಗ ಮಸೀದಿ ಒಳಗಡೆ ಕುಳಿತಿದ್ದರು ಮತ್ತು ಸಕಲವನ್ನು ಕೂಡ ತಮ್ಮ ನೋಟ್ ಪುಸ್ತಕದಲ್ಲಿ ಬರೆದುಕೊಳ್ಳುತ್ತಿದ್ದರು. ನಂತರ ಭೈರಪ್ಪನವರು ಮುಸ್ಲಿಮರ ವಿದ್ಯಾಸಂಸ್ಥೆಯನ್ನು ನೋಡಲು ಬಯಸಿದರು. ಹೀಗಾಗಿ ಮುಷ್ತಾಕ್ ಅವರನ್ನು ಆಲೂರಿನ ಮುಸ್ಲಿಂ ವಿದ್ಯಾಸಂಸ್ಥೆಗೆ ಕರೆದುಕೊಂಡು ಹೋದರು. ಅಲ್ಲೇ ಇಡೀ ಸಂಸ್ಥೆಯ ಹೊರಾಂಗಣದಲ್ಲಿ ಸುತ್ತಾಡಿದ ಭೈರಪ್ಪನವರು ಅಲ್ಲಿನ ವ್ಯವಸ್ಥೆ ಮತ್ತು ವಿದ್ಯಾರ್ಥಿಗಳಿಗಾಗಿ ಮಾಡಿದ್ದ ವ್ಯವಸ್ಥೆ ಹಾಗೂ ಮತ್ತು ಅಭ್ಯಾಸ ಕ್ರಮ ಮೊದಲಾದವುಗಳನ್ನೆಲ್ಲ ಪರಿಶೀಲನೆ ಮಾಡಿ ತಮ್ಮ ನೋಟ್ ಬುಕ್‌ನಲ್ಲಿ ಬರೆದುಕೊಂಡರು.

ಆಗ ಮೊಬೈಲ್ ಮತ್ತು ಅದರ ಗೀಳು ಯಾರಿಗೂ ಅಂಟಿಕೊಂಡಿರಲಿಲ್ಲ. ರಾತ್ರಿ ಊಟದ ಟೇಬಲ್ ನಲ್ಲಿ ಮತ್ತು ಊಟದ ನಂತರ ಒಳ್ಳೆಯ ಚರ್ಚೆ ನಡೆಯುತ್ತಿತ್ತು. ಭೈರಪ್ಪನವರು ರೀತಿ ರಿವಾಜು ಆಲೋಚನಾ ಕ್ರಮದ ಬಗ್ಗೆ ಅನೇಕ ಪ್ರಶ್ನೆಗಳನ್ನು ಕೇಳುತ್ತಿದ್ದರು. ನಾನು ಅದಕ್ಕೆ ಸೂಕ್ತವಾಗಿ ಪ್ರತಿಕ್ರಿಯೆ ನೀಡುತ್ತಿದ್ದೆ. ನಂತರ ಅವರು ತತ್ವಶಾಸ್ತ್ರದ ಕ್ಲಾಸಿಕ್‌ಗಳ ಮೂಲಕ ವಿಚಾರಗಳನ್ನು ಚರ್ಚೆ ಮಾಡುತ್ತಿದ್ದರು. ಆಗ ಸಮೀನ ತನ್ನ ಸ್ಪರ್ಧಾತ್ಮಕ ಪರೀಕ್ಷೆಗಳ ಸಲುವಾಗಿ ಇಂಡಿಯನ್ ಹಿಸ್ಟರಿಯನ್ನು ಆಳವಾಗಿ ಅಭ್ಯಾಸ ಮಾಡುತ್ತಿದ್ದಳು. ಹೀಗಾಗಿ ಅವಳು ಅವರ ಅನೇಕ ಸಂದೇಹಗಳಿಗೆ ಇಂಡಿಯನ್ ಹಿಸ್ಟರಿಯ ದೃಷ್ಟಾಂತಗಳ ಮೂಲಕ ವಿವರಣೆ ನೀಡುತ್ತಿದ್ದಳು. ಅವರಿಬ್ಬರ ನಡುವೆ ನಡೆಯುತ್ತಿದ್ದ ಚರ್ಚೆಗಳನ್ನು ಕೇಳುವುದೇ ಒಂದು ಅದ್ಭುತವಾದ ಸಂದರ್ಭವಾಗಿತ್ತು. ಹೀಗೆ ಒಂದು ವಾರದವರೆಗೂ ನಮ್ಮಗಳ ಬಾಂಧವ್ಯ ಮುಂದುವರೆಯಿತು. ಭೈರಪ್ಪನವರ ಕುತೂಹಲದ ಕಣ್ಣುಗಳಿಗೆ ಮುಸ್ಲಿಂ ಹಿನ್ನೆಲೆಯ ಬದುಕು ಅಗೋಚರವಾಗಿಯೇ ಉಳಿಯಿತು. ಒಂದು ಸಮುದಾಯದ ಒಳ ಹೊರಗನ್ನು ಒಂದು ವಾರದೊಳಗೆ ತಿಳಿಯುವುದು ಅಸಾಧ್ಯದ ಕೆಲಸ. ಆದರೂ ಕೂಡ ಭೈರಪ್ಪನವರ ತೀವ್ರ ಕುತೂಹಲ ಮತ್ತು ವಿಷಯ ಸಂಗ್ರಹಣೆಯ ದಾಹ ಹಾಗೂ ಅಪರಿಚಿತ ಲೋಕಗಳ ಪರಿಚಯಮಾಡಿಕೊಳ್ಳುವ ತೀವ್ರತೆ ವಿಶಿಷ್ಟವಾಗಿತ್ತು. ಆದರೆ ನನಗೆ ಅನಿಸುತ್ತಿತ್ತು ಅವರು ಹೊರನೋಟದ ತೊಗಟೆಯ ಅರಿವನ್ನು ಮಾತ್ರ ಪಡೆಯುತ್ತಿದ್ದಾರೆ ಎಂದು. ಮುಸ್ಲಿಂ ಸಮುದಾಯದ ಮೇಲ್ನೋಟದ ಪರಿಚಯ ಮತ್ತು ಚಿಂತನೆಗಳನ್ನು ತೆಗೆದುಕೊಂಡರೆ ಹೊರತು ಅನುಭವವನ್ನು ಪಡೆಯಲು ಎಲ್ಲೋ ಸೋಲುತ್ತಿದ್ದಾರೆ ಅಂತ ಅನಿಸುತ್ತಿತ್ತು. ಹಾಗೂ ಈ ಎಲ್ಲ ಮಾಹಿತಿಯನ್ನು ಅವರು ಹೇಗೆ ಬರಹದಲ್ಲಿ ಬಳಕೆ ಮಾಡಬಹುದು ಮತ್ತು ಅವರ ಗ್ರಹಿಕೆ ಮತ್ತು ಬರವಣಿಗೆ ಮುಸ್ಲಿಂ ವಿರೋಧಿ ನಿಲುವನ್ನು ವ್ಯಕ್ತಪಡಿಸುವಾಗ ನನ್ನ ಬಗ್ಗೆ ಸಮುದಾಯದ ನಿಲುವು ಏನಾಗಬಹುದು ಎಂಬುದರ ಬಗ್ಗೆ ಕೂಡ ನನಗೆ ಆಲೋಚನೆ ಉಂಟಾಗುತ್ತಿತ್ತು. ಆದರೆ ನಾನು ಎಲ್ಲಾ ಆಲೋಚನೆಗಳನ್ನು ಬದಿಗೊತ್ತಿ ಭೈರಪ್ಪನವರ ಜೊತೆಯಲ್ಲಿ ಅತ್ಯಂತ ಸಹಜವಾಗಿ ವರ್ತನೆ ಮಾಡಿದೆ ಮತ್ತು ನನ್ನ ಕುಟುಂಬ ಕೂಡ ಇದಕ್ಕೆ ಪೂರಕವಾಗಿ ಸಂಪೂರ್ಣ ಸಹಕಾರವನ್ನು ನೀಡಿತು. ಆರಂಭದಿಂದಲೇ ಕಿರಿಕಿರಿ ವ್ಯಕ್ತಪಡಿಸುತ್ತಿದ್ದ ಮಗ ಮಧ್ಯ ಮಧ್ಯದಲ್ಲಿ ಹೋಗಿ ನನ್ನ ತಾಯಿಯ ಮನೆಯಲ್ಲಿ ಗಡದ್ದಾಗಿ ಬಿರಿಯಾನಿ ಚಿಕನ್ ಕಬಾಬ್ ತಿಂದು ಬಂದರೂ ಮುನಿಸಿಕೊಂಡು ನನ್ನಿಂದಲೂ ಭೈರಪ್ಪನವರಿಂದಲೂ ದೂರವಾಗಿಯೇ ಉಳಿದ.

ನಂತರ ಭೈರಪ್ಪನವರ ಆವರಣ ಕಾದಂಬರಿ ಪ್ರಕಟವಾಯಿತು. ಆವರಣದಲ್ಲಿ ಭೈರಪ್ಪನವರು ರಿಸರ್ಚ್ ಮಾಡಿದಂತೆಯೇ ತಮ್ಮ ಕೆಲವು ಪೂರ್ವ ನಿರ್ಧಾರಿತ ಪ್ರಮೇಯಗಳಿಗೆ ಅನುಕೂಲವಾಗುವಂತಹ ಮತ್ತು ತಕ್ಕದಾದ ನಿದರ್ಶನಗಳನ್ನೇ ಕೊಟ್ಟು ಮುಸ್ಲಿಂ ಸಮುದಾಯದ ರಾಕ್ಷಸೀಕರಣದ ಬಿಂಬಕ್ಕೆ ಪೂರಕವಾದ ಬರವಣಿಗೆಯನ್ನು ಕೊಟ್ಟರು. ಆದರೆ ಅವರು ಸದರಿ ಕಾದಂಬರಿಯ ಪೀಠಿಕೆಯಲ್ಲಿ ಒಬ್ಬ ಸಹೋದರಿಯ ಮನೆಯಲ್ಲಿ ಉಳಿದುದಾಗಿ ತಿಳಿಸಿ, ಹೆಸರನ್ನು ಬರೆಯಲಿಲ್ಲ. ಹೀಗಾಗಿ ಆ ಸಹೋದರಿ ಯಾರು ಎಂಬುದರ ಬಗ್ಗೆ ಊಹಾಪೋಹದ ಮಟ್ಟದಲ್ಲಿಯೇ ಉಳಿಯಿತು. ಆದರೆ ಭೈರಪ್ಪನವರು ನಮ್ಮ ಮನೆಗೆ ಬಂದ ಸಂದರ್ಭದಲ್ಲಿ ನಮ್ಮ ಮನೆಗೆ ಅನೇಕ ಲೇಖಕ ಲೇಖಕಿಯರು ಬಂದು ಅವರೊಡನೆ ಫೋಟೋಗಳನ್ನು ತೆಗೆಸಿಕೊಂಡಿದ್ದರು. ಹೀಗಾಗಿ ಕ್ರಮೇಣ ಎಲ್ಲರಿಗೂ ಆವರಣ ಬರವಣಿಗೆಯ ಮುಂಚಿತವಾಗಿ ಅವರು ನಮ್ಮ ಮನೆಯಲ್ಲಿದ್ದರು ಎಂಬ ವಿಷಯವು ತಿಳಿದು ಬಂತು.

''ಆವರಣ'' ದ ಬರವಣಿಗೆಯು ತೀವ್ರ ವಿವಾದವಾಗುತ್ತದೆ ಎಂಬುದು ಅವರ ನಿರೀಕ್ಷೆಯಾಗಿತ್ತು. ಅವರು ವಿವಾದವನ್ನು ಬಯಸಿದ್ದರು ಎಂದು ನನಗೆ ಅನಿಸುತ್ತೆ.

ಆದರೆ ಅದು ವಿವಾದದ ಸ್ವರೂಪವನ್ನು ಪಡೆಯಲಿಲ್ಲ. ಬದಲಿಗೆ ಗೌರಿ ತಮ್ಮ ಪ್ರಕಾಶನದಿಂದ ''ಆವರಣ ಒಂದು ವಿಕೃತಿ'' ಎಂಬ ಕೃತಿಯನ್ನು ಪ್ರಕಟಿಸಿದರು. ಅದರಲ್ಲಿ ಆವರಣದ ಬಗ್ಗೆ ಅನೇಕ ಲೇಖಕರ ವಿಮರ್ಶೆಗಳಿವೆ.



ನನಗೆ ಅನಿಸಿದ್ದು, ಭೈರಪ್ಪನವರು ಊಟ ತಿಂಡಿಯ ಆಹಾರ ಅಭ್ಯಾಸದಲ್ಲಿ ಕಠೋರ ನಿಯಮವನ್ನೇನು ಪಾಲಿಸುತ್ತಿರಲಿಲ್ಲ. ನನ್ನ ಬಾಲ್ಯಕಾಲದಿಂದಲೂ ನನಗೆ ಓದಿನ ರುಚಿ ಹತ್ತಿದ್ದು ಭೈರಪ್ಪನವರ ಬರವಣಿಗೆಯ ಮೂಲಕವೇ. ಅವರ ಓದುಗ ಬಳಗದ ಅತ್ಯಂತ ಲಾಯಲ್ ಆದ ಓದುಗಳಾಗಿದ್ದೆ ನಾನು. ಆದರೆ ಅವರ ಧೋರಣೆ ಬದ್ಧತೆ ಮತ್ತು ಪೂರ್ವಗ್ರಹ ಪೀಡಿತ ಆಲೋಚನಾ ಸರಣಿಯ ಪ್ರತಿಪಾದನೆಯ ನಂತರ ನಾನು ಅವರಿಗೆ ಪ್ರಿಯ ಓದುಗಳಾಗಿ ಉಳಿಯಲಿಲ್ಲ. ಬದಲಿಗೆ ಒಬ್ಬ ನುರಿತ ಲಾಯರ್‌ನಂತೆ ಕೆಲ ವಿಷಯಗಳನ್ನು ರೂಪಿಸಿಕೊಂಡು ಅದನ್ನು ಸಂಶೋಧನೆಯ ಮೂಲಕ ಅಗೆದು ತೆಗೆದ ಮಾಹಿತಿಯನ್ನು ಬಳಸಿ ಪ್ರಬುದ್ಧವಾಗಿ ನಿರೂಪಿಸುತ್ತಿದ್ದ ವಾದದ ಶೈಲಿಯಂತೆ ಕಂಡು ಬರುತ್ತಿದ್ದವು. ಅವರ ಸೃಜನಶೀಲತೆಯನ್ನು ಅಪಹರಿಸಿದವರು ಯಾರು ಎಂದು ನನ್ನನ್ನು ನಾನೇ ಪ್ರಶ್ನಿಸಿಕೊಳ್ಳುತ್ತಿದ್ದೆ. ಸೈದ್ಧಾಂತಿಕವಾಗಿ ನಮ್ಮ ನಡುವೆ ಭಿನ್ನಾಭಿಪ್ರಾಯವಿದ್ದರೂ ಕೂಡ, ಅವರನ್ನು ಕಂಡು ಮಾತನಾಡಿಸಿ ಚರ್ಚಿಸಿ ಅವರ ನೆನಪುಗಳು ನನ್ನ ಮನ ಪಟಲದಲ್ಲಿ ಉಳಿದು, ಇಂದು ಅವರು ಸ್ವರ್ಗಸ್ಥರಾದರು ಎಂಬ ವಿಷಯದಿಂದ ಒಂದು ಭಾವತಂತು ತುಂಡಾದಂತೆ ಭಾಸವಾಗುತ್ತಿದೆ. ನನಗೆ ಏನೋ ಖಾಸಗಿ ನಷ್ಟವಾದಂತೆ ಅನಿಸುತ್ತಿದೆ. ಭೈರಪ್ಪನವರಿಗೆ ನನ್ನ ಭಾವಪೂರ್ಣ ನಮನಗಳು.

**– ಬಾನು ಮುಷ್ತಾಕ್,** ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತರು



## 26-9-2025 ದಿನ ಭವಿಷ್ಯ

**ಮೇಷ:** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಒಬ್ಬರು ಇನ್ನೊಬ್ಬರ ದೃಷ್ಟಿಕೋನವನ್ನು ಅರ್ಥಮಾಡಿಕೊಳ್ಳುವ ಮೂಲಕ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸಿ.

**ವೃಷಭ:** ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ. ಪ್ರತಿ ದಿನ ಪ್ರೀತಿಯಲ್ಲಿ ಬೀಳುವ ನಿಮ್ಮ ಸ್ವಭಾವವನ್ನು ಬದಲಾಯಿಸಿ.

**ಮಿಥುನ:** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ. ಇದು ಜೀವನದ ಸುಗಂಧವನ್ನು ಹಾಳುಮಾಡುವ ಹಾಗೂ ಒಂದು ಸಮೃದ್ಧ ಜೀವನವನ್ನು ನಡೆಸುವ ಬಯಕೆಯನ್ನು ಸಾಯಿಸುವ ನೀಚ ಚಿಂತನೆಯಾಗಿದೆ.

**ಕರ್ಕಾಟಕ:** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನೀವು ನಂಬುವ ಯಾರಾದರೂ ನಿಮಗೆ ಸಂಪೂರ್ಣ ನಿಜ ಹೇಳದಿರಬಹುದು – ಇತರರು ಮನವೊಲಿಸುವ ನಿಮ್ಮ ಸಾಮರ್ಥ್ಯ ಬರುವ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ. ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ.

**ಸಿಂಹ:** ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು ಮತ್ತು ಇದು ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ.

**ಕನ್ಯಾ:** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ. ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವೇ ತೊಂದರೆಗೊಳಗಾಗಬಹುದು.

**ತುಲಾ:** ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ನೀವು ಇಂದು ಪ್ರೀತಿಯ ಸಮೃದ್ಧ ಚಾಕೊಲೇಟ್‌ನ ರುಚಿ ಸವಿಯುತ್ತೀರಿ.

**ವೃಶ್ಚಿಕ:** ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ಕುಟುಂಬದಲ್ಲಿ ತೊಂದರೆಯುಂಟಾಗಬಹುದು. ಕುಟುಂಬದ ಜವಾಬ್ದಾರಿಗಳ ಬಗ್ಗೆ ನಿಮ್ಮ ಉದಾಸೀನತೆ ಅವರಿಗೆ ಸಿಟ್ಟು ತರಬಹುದು. ನಿಮ್ಮ ಉತ್ಸಾಹ ನಿಮ್ಮ ಪ್ರೀತಿಯನ್ನು ಸಂಕಟಕ್ಕೆ ಸಿಲುಕಿಸಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಧನು:** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಭೇಟಿ ನೀಡುವ ಸಂಬಂಧಿಗಳು ನೀವು ಅಂದುಕೊಂಡಿದ್ದಕ್ಕಿಂತ ಚೆನ್ನಾಗಿರಬಹುದು. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ. ಬಾಕಿಯಿರುವ ಸಮಸ್ಯೆಗಳನ್ನು ಶೀಘ್ರದಲ್ಲೇ ಪರಿಹರಿಸಬೇಕು.


**ಮಕರ:** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಹಣಕಾಸಿನಲ್ಲಿ ಸುಧಾರಣೆ ನೀವು ಪ್ರಮುಖ ಖರೀದಿಗಳನ್ನು ಮಾಡುವುದನ್ನು ಅನುಕೂಲಕರವಾಗಿಸುತ್ತದೆ. ನೀವು ಬಯಸುವ ಎಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ.

**ಕುಂಭ:** ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ.

**ಮೀನ:** ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು.

# ಒಂದು ತಲೆಮಾರಿನ ಓದುಗರ ಅಭಿರುಚಿ ಹೆಚ್ಚಿಸಿದ ಸಾಹಿತಿ

- **ಭೈರಪ್ಪನವರ ಬಾಲ್ಯದ ದಟ್ಟ ಅನುಭವಗಳ ಹಂದರ ಹೊಂದಿರುವ ಗೃಹಭಂಗದ ಕುರಿತು ಈಗಾಗಲೇ ಸಾಕಷ್ಟು ವಿಶ್ಲೇಷಣೆಗಳು ನಡೆದಿವೆ. ಆದರೆ, ಪೂರ್ಣ ಪ್ರಮಾಣದಲ್ಲಿ ಗೃಹಭಂಗವನ್ನು ವಿಶ್ಲೇಷಿಸುವ, ಚರ್ಚಿಸುವ ಕೆಲಸಕ್ಕೆ ಇನ್ನೂ ಅವಕಾಶವಿದೆ ಎಂದೇ ನನ್ನ ಅನಿಸಿಕೆ. ನಮ್ಮ ರಾಜ್ಯದ ಬಯಲುಸೀಮೆಯ (ಚನ್ನರಾಯಪಟ್ಟಣ ತಾಲೂಕು) ಹಳ್ಳಿಯ ಸಮತೋಲಿತ ಜೀವನವು, 1920–40ರ ದಶಕದ ಅವಧಿಯಲ್ಲಿ ಹೇಗೆ ನಲುಗಿತು, ಛಿದ್ರವಾಯಿತು ಎಂಬುದರ ಚಿತ್ರಣ ಗೃಹಭಂಗದಲ್ಲಿದೆ.**



ಗುತ್ತದೆ ಎಂಬ ವಾಸ್ತವವನ್ನು ಮರೆಯದೆ ಇವತ್ತಿಗೂ ಕೃತಿರಚನೆ ಮಾಡುತ್ತ ಬಂದಿರುವ ಲೇಖಕ ಶ್ರೀಯುತ ಎಸ್. ಎಲ್.

ನಾನು ಮೊದಲ ಬಾರಿ ಎಸ್.ಎಲ್.ಭೈರಪ್ಪ ಅವರನ್ನು ನೋಡಿದ್ದು ಶಿವಮೊಗ್ಗದಲ್ಲಿ, ಅದು 90ರ ದಶಕ. ಕಾರ್ಯಕ್ರಮವೊಂದಕ್ಕೆ ಬಂದಿದ್ದ ಅವರನ್ನು ನಾನು, ನನ್ನ ಮಡದಿ, ಮಕ್ಕಳು ಎಲ್ಲರೂ ಹತ್ತಿರದಿಂದ ನೋಡಿದೆವು. ಅವರ ಒಂದು ಕಾದಂಬರಿಯನ್ನು ಖರೀದಿಸಿ, ಅದರ ಮೇಲೆ ಅವರ ಹಸ್ತಾಕ್ಷರ ಪಡೆದೆವು. ಕಾದಂಬರಿಕಾರ ಭೈರಪ್ಪನವರನ್ನು ಹತ್ತಿರದಿಂದ ನೋಡುವುದು ಎಂದರೆ, ಅದೊಂದು ಸಂಭ್ರಮ! ಏಕೆಂದರೆ, ನಮ್ಮ ಕುಟುಂಬದವರು, ಭಾವಂದಿರು, ಬಂಧುಗಳು ಎಲ್ಲರೂ ಬಹು ಹಿಂದಿನಿಂದಲೂ ಭೈರಪ್ಪನವರ ಕಾದಂಬರಿಗಳನ್ನು ಓದಿಕೊಂಡು ಬಂದಿದ್ದೇವೆ.

ಹೊನ್ನಾಳಿ ಸನಿಹದ ಸವಳಂಗ ಎಂಬ ಪುಟ್ಟ ಹಳ್ಳಿಯಲ್ಲಿ ಹೊಟೆಲ್ ವ್ಯವಹಾರ ನಡೆಸುತ್ತಿದ್ದ ನನ್ನ ಭಾವಂದಿರು, 1981ರ ಸಮಯದಲ್ಲೇ ಭೈರಪ್ಪನವರ ಅದುವರೆಗಿನ ಎಲ್ಲಾ ಕಾದಂಬರಿಗಳನ್ನು ಖರೀದಿಸಿ, ಓದಿ, ಆ ಹಳ್ಳಿಯಲ್ಲಿದ್ದ ತಮ್ಮ ಬಾಡಿಗೆ ಮನೆಯಲ್ಲಿಟ್ಟುಕೊಂಡು, ಬಂದವರಿಗೆಲ್ಲಾ ಅಭಿಮಾನದಿಂದ ತೋರಿಸುತ್ತಿದ್ದರು, ಮಾತ್ರವಲ್ಲ, ಓದಲು ಎರವಲು ಕೊಡುತ್ತಿದ್ದರು. ಅವರಲ್ಲಿದ್ದ ಆ ಎಲ್ಲಾ ಕಾದಂಬರಿಗಳನ್ನೂ ನಮ್ಮ ಕುಟುಂಬದವರು, ಬಂಧುಗಳು ಪಡೆದು ಓದುವ ಪರಿಪಾಠವಿತ್ತು. ಇಲ್ಲಿ ಭೈರಪ್ಪನವರ ಮೇಲಿನ ಅಭಿಮಾನದ ಜತೆಯಲ್ಲೇ, ಹಳ್ಳಿಗಾಡಿನ ಸಾಮಾನ್ಯ ಕುಟುಂಬವೊಂದು ಓದುವ ಸಂಸ್ಕೃತಿಯನ್ನು ಬೆಳೆಸಿಕೊಂಡ ಪ್ರಕ್ರಿಯೆಯನ್ನೂ ಗಮನಿಸಬಹುದು.

ಆ ಪುಟ್ಟ ಹಳ್ಳಿಯಲ್ಲಿ ಹೊಟೇಲ್ ನಡೆಸುತ್ತಿದ್ದ ನಮ್ಮ ಭಾವಂದಿರಲ್ಲಿ ಓದುವ ಅಭಿರುಚಿ ಬೆಳೆಯಬೇಕೆಂದರೆ, ಅವರ ಎಲ್ಲಾ ಕಾದಂಬರಿಗಳನ್ನು ಖರೀದಿಸಿ, ಸಂಗ್ರಹಿಸಿಕೊಂಡು ಆಗಾಗ ಓದಬೇಕೆಂಬ ಆಸೆ ಬೆಳೆಯಬೇಕೆಂದರೆ, ಅವರ ಆ ಕಾದಂಬರಿಗಳ ಸತ್ವವನ್ನು ಗಮನಿಸಬೇಕು. ಅಂದಿನ ಜನಪ್ರಿಯ ಸಾಹಿತ್ಯಕ್ಕಿಂತ ಬಹು ಉನ್ನತ ಮಟ್ಟದ, ಆದರೆ ಬಿಡದೆ ಓದಿಸಿಕೊಂಡು ಹೋಗುವ, ಮನೋಜ್ಞ ಕಾದಂಬರಿಗಳನ್ನು ಬರೆದು, ಜನಸಾಮಾನ್ಯರನ್ನು ಓದಲು ಹಚ್ಚಿದ್ದು ಭೈರಪ್ಪನವರ ಹೆಗ್ಗಳಿಕೆ. ಕನ್ನಡ ನಾಡಿನ ಜನಸಾಮಾನ್ಯರಲ್ಲಿ ಭೈರಪ್ಪನವರ ಕಾದಂಬರಿಗಳು ಓದುವ ಅಭಿರುಚಿಯನ್ನು ಬೆಳೆಸಿದ ಪರಿಯು ಒಂದು ವಿಸ್ಮಯ. ಈ ಕುರಿತು ಇತರ ಸಾಹಿತಿಗಳು, ಚಿಂತಕರು, ಸಂಕೋಚವಿಲ್ಲದೇ ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದಾರೆ.

ಒಂದೆರಡು ತಲೆಮಾರಿನ ಓದುಗರಿಗೆ, ಓದುವ ರುಚಿಯನ್ನು ಹತ್ತಿಸಿದವರಲ್ಲಿಲ ಭೈರಪ್ಪನವರು ಪ್ರಮುಖರು. ಈ ಕುರಿತು ತೇಜಸ್ವಿಯವರು ಹಿಂದೊಮ್ಮೆ ಬರೆದದ್ದನ್ನು ಗಮನಿಸಬಹುದು.

ಕಾದಂಬರಿಕಾರರಾಗಿ ಖ್ಯಾತರಾಗಿರುವ ಎಸ್.ಎಲ್. ಭೈರಪ್ಪನವರು ಕನ್ನಡ ಗದ್ಯಸಾಹಿತ್ಯದ ಬೆಳವಣಿಗೆಗೆ ಗಣನೀಯ ಸೇವೆ ಸಲ್ಲಿಸಿರುವವರು. ನವ್ಯಸಾಹಿತ್ಯ ಸಂದರ್ಭದಲ್ಲಿ ಸಾಹಿತ್ಯವನ್ನು ಕೊಂಡು ಓದುವವರ ಸಂಖ್ಯೆಯೇ ನಶಿಸಿ ಹೋಗುತ್ತಿದ್ದಾಗ, ಭೈರಪ್ಪನವರು ಓದುಗ ಸಹೃದಯರ ಸಮುದಾಯವನ್ನು ಜೀವಂತವಾಗಿ ಇಟ್ಟವರು. ಸಾಹಿತಿಗಳಲ್ಲಿ ಬಹುಪಾಲು ಪ್ರಶಸ್ತಿ, ಸನ್ಮಾನಗಳ ಬೆನ್ನುಹತ್ತಿರುವ, ಸ್ವಂತ ಅಭಿಮಾನಿಗಳ ಕೂಟವನ್ನು ಕಟ್ಟಿಕೊಳ್ಳುತ್ತಿರುವ ಸಮಕಾಲೀನ ಸಂದರ್ಭದಲ್ಲಿ, ಸಾಹಿತ್ಯ ಅಂತಿಮವಾಗಿ ಲೇಖಕ ಮತ್ತು ಓದುಗರ ನಡುವಿನ ಸಂವಾದ ವಾಗಿಯೇ ಬದುಕಬೇಕಾ

ಭೈರಪ್ಪನವರು–ಕೆ.ಪಿ ಪೂರ್ಣಚಂದ್ರ ತೇಜಸ್ವಿ (ತೇಜಸ್ವಿ ಪತ್ರಗಳು ಕೃತಿಯಲ್ಲಿ) ನನ್ನ ಮೇಲೆ ಪ್ರಚಂಡ ಪರಿಣಾಮ ಬೀರಿದ ಕಾದಂಬರಿಗಳಲ್ಲಿ ಭೈರಪ್ಪನವರ ಗೃಹಭಂಗ ಮುಂಚೂಣಿಯಲ್ಲಿದೆ. ನಮ್ಮ ದೇಶದ 14 ಕ್ಕೂ ಅಧಿಕ ಭಾಷೆಗಳಿಗೆ ಅನುವಾದಗೊಂಡಿರುವ ಈ ಕಾದಂಬರಿಯು, ವಿಶ್ವದರ್ಜೆಯ ಕಾದಂಬರಿಯಾಗಿ ಗುರುತಿಸಿಕೊಳ್ಳುವಷ್ಟು ಸಶಕ್ತವಾಗಿದೆ, ಮನೋಜ್ಞವಾಗಿದೆ.

ಭೈರಪ್ಪನವರ ಬಾಲ್ಯದ ದಟ್ಟ ಅನುಭವಗಳ ಹಂದರ ಹೊಂದಿರುವ ಗೃಹಭಂಗದ ಕುರಿತು ಈಗಾಗಲೇ ಸಾಕಷ್ಟು ವಿಶ್ಲೇಷಣೆಗಳು ನಡೆದಿವೆ. ಆದರೆ, ಪೂರ್ಣ ಪ್ರಮಾಣದಲ್ಲಿ ಗೃಹಭಂಗವನ್ನು ವಿಶ್ಲೇಷಿಸುವ, ಚರ್ಚಿಸುವ ಕೆಲಸಕ್ಕೆ ಇನ್ನೂ ಅವಕಾಶವಿದೆ ಎಂದೇ ನನ್ನ ಅನಿಸಿಕೆ. ನಮ್ಮ ರಾಜ್ಯದ ಬಯಲುಸೀಮೆಯ (ಚನ್ನರಾಯಪಟ್ಟಣ ತಾಲೂಕು) ಹಳ್ಳಿಯ ಸಮತೋಲಿತ ಜೀವನವು, 1920–40ರ ದಶಕದ ಅವಧಿಯಲ್ಲಿ ಹೇಗೆ ನಲುಗಿತು, ಛಿದ್ರವಾಯಿತು ಎಂಬುದರ ಚಿತ್ರಣ ಗೃಹಭಂಗದಲ್ಲಿದೆ.

ಬ್ರಿಟಿಷರು ತಮ್ಮ ಲಾಭಕ್ಕಾಗಿ ತಂದ ಬಿಗಿ ಕಾನೂನುಗಳು, ಅವರ ಆಶ್ರಯದಲ್ಲಿ ರಾಜ್ಯಭಾರ ನಡೆಸುತ್ತಿದ್ದ ಮೈಸೂರು ಸಂಸ್ಥಾನದ ಅಧಿಕಾರಶಾಹಿ ನಡೆಸುತ್ತಿದ್ದ ದಬ್ಬಾಳಿಕೆ, ಮೈಸೂರು ಪೊಲೀಸರು ಸ್ವಾತಂತ್ರ್ಯಪೂರ್ವದಲ್ಲಿ ತೋರುತ್ತಿದ್ದ ದರ್ಪ, ದುಂಡಾವರ್ತಿ – ಇವೆಲ್ಲವೂ, ಅಂದಿನ ಗ್ರಾಮೀಣ ಬದುಕಿನ ಬೆನ್ನೆಲುಬನ್ನೇ ಮುರಿದ ಚಿತ್ರಣ ಈ ಕಾದಂಬರಿಯಲ್ಲಿದೆ.

ಶಾನುಭೋಗಿಕೆ ನಡೆಸುತ್ತಿದ್ದ ಕುಟುಂಬವೊಂದು ಸಂಪೂರ್ಣವಾಗಿ ಛಿದ್ರವಾಗುವ ಸನ್ನಿವೇಶವು, ಮುಂದಿನ ದಶಕಗಳಲ್ಲಿ ಕೃಷಿಕರು, ಇತರ ಸಮುದಾಯದವರು ಪ್ರಾಧಾನ್ಯ ಪಡೆಯುವುದರ ಮುನ್ ಸೂಚನೆಯಾಗಿಯೂ ರೂಪುಗೊಂಡಿದೆ ಮತ್ತು ಈ ರೀತಿಯ ಹಲವು ವಿಚಾರಗಳ ಹಿನ್ನೆಲೆಯಲ್ಲಿ ಗೃಹಭಂಗವನ್ನು ಮರುಓದಿಗೆ ಒಳಪಡಿಸುವ ಅಗತ್ಯವಿದೆ.

ಗೃಹಭಂಗ, ದೂರಸರಿದರು, ಪರ್ವ, ಸಾರ್ಥ, ವಂಶವೃಕ್ಷ, ಅನ್ವೇಷಣೆ, ದಾಟು, ತಂತು ಮೊದಲಾದ ಅವರ ಕಾದಂಬರಿಗಳನ್ನು ರಚನಾ ತಂತ್ರದ ದೃಷ್ಟಿಯಿಂದಲೂ ಗುರುತಿಸಬೇಕಾದ ಅಗತ್ಯವಿದೆ. ಒಂದೊಂದು ಕಾದಂಬರಿಯಲ್ಲಿ ಒಂದೊಂದು ಬಗೆಯ ತಂತ್ರವನ್ನು ಭೈರಪ್ಪನವರು ಅಳವಡಿಸಿದ್ದು ಗಮನಕ್ಕೆ ಬರುತ್ತದೆ. ಭೈರಪ್ಪನವರು ಕನ್ನಡ ಸಾರಸ್ವತ ಲೋಕ ನೀಡಿದ ಕೆಲವೇ ವಿಶ್ವದರ್ಜೆಯ ಸಾಹಿತಿಗಳಲ್ಲಿ ಒಬ್ಬರು ಎಂಬುದನ್ನು ಗುರುತಿಸಿದಾಗ, ಅವರ ಕೊಡುಗೆಯ ಮೌಲ್ಯ ಅರಿವಾದೀತು.

ಕನ್ನಡ ಕಾದಂಬರಿ ಲೋಕವನ್ನು ಶ್ರೀಮಂತಗೊಳಿಸಿದ, ಪ್ರಬುದ್ಧ ವಿಷಯಗಳನ್ನು ಕಾದಂಬರಿಯಲ್ಲಿ ಅಳವಡಿಸಿ, ಜನಸಾಮಾನ್ಯ ಓದುಗರನ್ನು ಬೆರಗಾಗಿಸಿದ, ಚಿಂತನೆಗೆ ದೂಡಿದ ಕಾದಂಬರಿ ಕಾರರಾದ ಎಸ್.ಎಲ್ ಭೈರಪ್ಪನ ವರಿಗೆ ಅಂತಿಮ ನಮನ ಗಳು..!

**– ಶಶಿಧರ** ಹಾಲಾಡಿ

## ಸೆಪ್ಟೆಂಬರ್ 26ರಂದು ರಾಜ್ಯಾದ್ಯಂತ ಚಿತ್ರಮಂದಿರದಲ್ಲಿ ಕುಂಟೆಬಿಲ್ಲೆ







ರಾಜ್ಯ ಪ್ರಶಸ್ತಿ ಪುರಸ್ಕೃತ ಹೂವಿನ ಹಾರ ಖ್ಯಾತಿಯ ನಿರ್ದೇಶಕ ಸಿದ್ದೇಗೌಡ ಜಿ.ಬಿ.ಎಸ್ ನಿರ್ದೇಶಿಸಿರುವ ಚಿತ್ರ ಕುಂಟೆಬಿಲ್ಲೆ. ಇತ್ತೀಚೆಗೆ ಸೆನ್ಸಾರ್ ಪ್ರಕ್ರಿಯೆ ಮುಗಿಸಿರುವ ಚಿತ್ರತಂಡ, ಇದೀಗ ಬಿಡುಗಡೆಯ ಹಂತಕ್ಕೆ ಬಂದಿದೆ. ರಂಗಭೂಮಿ ಹಿನ್ನೆಲೆಯಿಂದ ಬಂದಿರುವ ಯದು ಮುಖ್ಯಭೂಮಿಕೆಯಲ್ಲಿದ್ದು, ಕೃಷ್ಣ ತುಳಸಿ ನಟಿ ಮೇಘಶ್ರೀ ಅವರಿಗೆ ಜೋಡಿಯಾಗಿದ್ದಾರೆ.

ಇದೊಂದು ನೈಜ ಘಟನೆಯಾಧಾರಿತ ಸಿನಿಮಾ. ಇಡೀ ಚಿತ್ರಕಥೆ ಅದೊಂದು ಘಟನೆ ಸುತ್ತ ಇದೆ. ಅದನ್ನು ತೆರೆಯ ಮೇಲೆ ನೋಡಿದರೆ ಚೆಂದ. ಕುಂಟೆಬಿಲ್ಲೆ ಶೀರ್ಷಿಕೆ ನೋಡಿ ಇದು ಮಕ್ಕಳ ಸಿನಿಮಾ ಎಂದು ಕೇಳುವವರು ಇದ್ದಾರೆ. ಆದರೆ, ಇದು ಇಬ್ಬರು ಪ್ರೇಮಿಗಳ ಸುತ್ತ ನಡೆಯುವ ಕಥೆ.

ಈ ಆಧುನೀಕರಣದಲ್ಲಿ ಪ್ರೀತಿಗೆ ಕುಟುಂಬ ಹಾಗೂ ಸಮಾಜದಿಂದ ಹಲವಾರು ರೀತಿಯಲ್ಲಿ ವಿರೋಧ ವ್ಯಕ್ತವಾಗುತ್ತವೆ. ಇಂತಹ ಸಮಯದಲ್ಲಿ ಪ್ರೇಮಿಗಳು ಮುಂದಿನ ನಡೆ ಏನು ಎಂಬುದೇ ಚಿತ್ರದ ಒನ್‌ಲೈನ್. ಗ್ರಾಮೀಣ ಹಿನ್ನೆಲೆಯಲ್ಲಿ ಮೂಡಿರುವ ಚಿತ್ರ. ಪ್ರೀತಿ, ಪ್ರೇಮದ ಕಥೆಯಲ್ಲಿ ಸಸ್ಪೆನ್ಸ್, ಥ್ರಿಲ್ಲರ್ ಹಾಗೂ ಕ್ರೈಂ ಅಂಶಗಳೂ ಇವೆ. ಹಾಗಾಗಿ, ಇದು ಹೊಸ ಬಗೆಯ ಸಿನಿಮಾ ಅಂತನ್ನಿಸಬಹುದು.

ಮೈಸೂರು, ಗುಂಡ್ಲುಪೇಟೆ, ಎಚ್.ಡಿ.ಕೋಟೆ ಮುಂತಾದೆಡೆ ಶೂಟಿಂಗ್ ಮಾಡಿದ್ದೇವೆ. ಸೆಪ್ಟೆಂಬರ್ 26 ರಂದು ರಾಜ್ಯಾದ್ಯಂತ ಸಿನಿಮಾ ಬಿಡುಗಡೆ ಮಾಡಲಿದ್ದೇವೆ. ಹೊಸ ಅನುಭವ ನೀಡುವ ಚಿತ್ರವಿದು ಎನ್ನುತ್ತಾರೆ ಸಿದ್ದೇಗೌಡ.

ಯದು ಹಾಗೂ ಮೇಘಶ್ರೀ ಜತೆ ಸುಚೇಂದ್ರ ಪ್ರಸಾದ್, ಸುಧಾ ಬೆಳವಾಡಿ, ಶಂಕರ್ ಅಶ್ವತ್ಥ್, ಭವಾನಿ ಪ್ರಕಾಶ್ ಮುಂತಾದವರು ಕುಂಟೆಬಿಲ್ಲೆ ಚಿತ್ರದ ತಾರಾಗಣದಲ್ಲಿದ್ದಾರೆ.

## ನವರಾತ್ರಿಗೆ ಡೆವಿಲ್ ಬಿಗ್ ಸರ್‌ಪ್ರೈಸ್; ದರ್ಶನ್ ಅಭಿಮಾನಿಗಳು ರೆಡಿನಾ?

ಮಿಲನಾ ಪ್ರಕಾಶ್ ನಿರ್ದೇಶನದ ಡೆವಿಲ್ ಸಿನಿಮಾ ಬಿಡುಗಡೆಗೆ ಸಜ್ಜಾಗುತ್ತಿದೆ. ಪೋಸ್ಟ್ ಪ್ರೊಡಕ್ಷನ್ ವರ್ಕ್ ಭರದಿಂದ ಸಾಗುತ್ತಿದ್ದು ಡಿಸೆಂಬರ್ 12ಕ್ಕೆ ಸಿನಿಮಾ ತೆರೆಗೆ ತರುವುದಾಗಿ ಚಿತ್ರತಂಡ ಘೋಷಿಸಿದೆ. ಈಗಾಗಲೇ ಇದ್ರೇ ನೆಮ್ದಿಯಾಗಿರ್ಬೇಕ್ ಸಾಂಗ್ ಹಿಟ್ ಆಗಿದೆ.

ರೇಣುಕಾಸ್ವಾಮಿ ಪ್ರಕರಣದಲ್ಲಿ ನಟ ದರ್ಶನ್ ಜೈಲು ಸೇರಿದ್ದಾರೆ. ಆದರೂ ಸಿನಿಮಾ ಬಿಡುಗಡೆಗೆ ಯಾವುದೇ ತೊಂದರೆ ಆಗಬಾರದು ಎಂದು ದರ್ಶನ್ ಹೇಳಿದ್ದಾರೆ. ಹಾಗಾಗಿ ಸಿನಿಮಾ ತೆರೆಗೆ ತರುವ ಪ್ರಯತ್ನ ನಡ್ತೀದೆ. ಅಜನೀಶ್ ಲೋಕನಾಥ್ ಸಂಗೀತದಲ್ಲಿ ಚಿತ್ರದ ಮೊದಲ ಸಾಂಗ್ ಸದ್ಯ 15 ಮಿಲಿಯನ್ ವೀವ್ಸ್ ಸಾಧಿಸಿ ಸದ್ದು ಮಾಡ್ತಿದೆ. ಸೋಶಿಯಲ್ ಮೀಡಿಯಾದಲ್ಲಿ ಹುಕ್ ಸ್ಟೆಪ್ ರೀಲ್ಸ್ ಮಾಡುವವರಿಗೆ ಲೆಕ್ಕವಿಲ್ಲ.

ನವರಾತ್ರಿ ಸಂಭ್ರಮದಲ್ಲಿ ಚಿತ್ರದ ಮತ್ತೊಂದು ಹಾಡು ಬಿಡುಗಡೆ ಮಾಡಲು ಚಿತ್ರತಂಡ ಸಿದ್ಧತೆ ನಡೆಸಿದೆ. ಆಕ್ಷನ್ ಥ್ರಿಲ್ಲರ್ ಡೆವಿಲ್ ಚಿತ್ರದಲ್ಲಿ ಒಟ್ಟು 4 ಹಾಡುಗಳಿವೆ. ಈ ಬಾರಿ ಲವ್ ಸಾಂಗ್ ಅಂದ್ರೆ ರೊಮ್ಯಾಂಟಿಕ್ ಸಾಂಗ್ ರಿಲೀಸ್ ಆಗಲಿದೆ ಎಂದು ಬಲ್ಲ ಮೂಲಗಳಿಂದ ಮಾಹಿತಿ ಲಭ್ಯವಾಗಿದೆ. ಈ ವಾರವೇ ಸಾಂಗ್ ಹೊರ ಬರುವ ನಿರೀಕ್ಷೆ ಹೆಚ್ಚಿದೆ.



ಕಳೆದ ವರ್ಷ ದಸರಾ ಹಬ್ಬಕ್ಕೆ ಡೆವಿಲ್ ಸಿನಿಮಾ ತೆರೆಗೆ ತರುವ ಭರವಸೆ ನೀಡಿದ್ದರು ನಟ ದರ್ಶನ್. ಆದರೆ ರೇಣುಕಾಸ್ವಾಮಿ ಪ್ರಕರಣ ಬೆಳಕಿಗೆ ಬಂದು ಆರೋಪಿಯಾಗಿ ದರ್ಶನ್ ಜೈಲು ಸಂಕಷ್ಟ ಎದುರಿಸುತ್ತಿದ್ದಾರೆ. ಇದೇ ಕಾರಣಕ್ಕೆ ಸಿನಿಮಾ ಚಿತ್ರೀಕರಣ ತಡವಾಗಿತ್ತು. ಒಂದೂವರೆ ವರ್ಷದ ಬಳಿಕ ಸಿನಿಮಾ ಬಿಡುಗಡೆ ತಯಾರಿ ನಡ್ತೀದೆ.

ಡೆವಿಲ್ ಚಿತ್ರದಲ್ಲಿ ದರ್ಶನ್ ಜೋಡಿಯಾಗಿ ರಚನಾ ರೈ ನಟಿಸಿದ್ದಾರೆ. ಇವರಿಬ್ಬರ ಕೆಮೆಸ್ಟ್ರಿ ಹೇಗಿರುತ್ತದೆ ಎಂದು ನೋಡಲು ಅಭಿಮಾನಿಗಳು ಕಾಯುವಂತಾಗಿದೆ. ವರ್ಷದ ಕೊನೆಗೆ ದೊಡ್ಡ ದೊಡ್ಡ ಸಿನಿಮಾಗಳು ಬಿಡುಗಡೆ ಆಗುತ್ತಿವೆ. ಅದರಲ್ಲಿ ದರ್ಶನ್ ಡೆವಿಲ್ ಸಿನಿಮಾ ಕೂಡ ಹೈಪ್ ಕ್ರಿಯೇಟ್ ಮಾಡ್ತಿದೆ. 14 ವರ್ಷಗಳ ಹಿಂದೆ ಕೌಟುಂಬಿಕ ಕಲಹ ಹಿನ್ನೆಲೆಯಲ್ಲಿ ದರ್ಶನ್ ಪರಪ್ಪನ ಅಗ್ರಹಾರ ಜೈಲು ಸೇರಿದ್ದರು. ಅವರು ಜೈಲಿನಲ್ಲಿ ಇದ್ದಾಗಲೇ ಸಾರಥಿ ಸಿನಿಮಾ ತೆರೆಕಂಡು ಗೆದ್ದಿತ್ತು. ಇದೀಗ ಡೆವಿಲ್ ಸಿನಿಮಾ ಅದೇ ಮ್ಯಾಜಿಕ್ ರಿಪೀಟ್ ಮಾಡುತ್ತದೆ ಎಂದು ಅಭಿಮಾನಿಗಳು ಕಾಯುತ್ತಿದ್ದಾರೆ.

ಈ ಹಿಂದೆ ದರ್ಶನ್ ಹಾಗೂ ಪ್ರಕಾಶ್ ಕಾಂಬಿನೇಷನ್ ನಲ್ಲಿ ತಾರಕ್ ಸಿನಿಮಾ ತೆರೆಕಂಡು ಸಕ್ಸಸ್ ಕಂಡಿತ್ತು. ಅದೇ ಜೋಡಿ ಮತ್ತೆ ಈ ಬಾರಿ ಒಟ್ಟಿಗೆ ಕೆಲಸ ಮಾಡಿದೆ. ಸ್ವತಃ ಪ್ರಕಾಶ್ ಚಿತ್ರಕ್ಕೆ ಹಣ ಹೂಡಿದ್ದಾರೆ. ಮಹೇಶ್ ಮಂಜ್ರೇಕರ್, ಅಚ್ಯುತ್ ಕುಮಾರ್, ಅವಿನಾಶ್ ಸೇರಿದಂತೆ ದೊಡ್ಡ ತಾರಾಗಣ ಚಿತ್ರದಲ್ಲಿದೆ. ಬೆಂಗಳೂರು, ರಾಜಸ್ಥಾನ ಹಾಗೂ ಥಾಯ್ಲೆಂಡ್‌ನಲ್ಲಿ ಸಿನಿಮಾ ಚಿತ್ರೀಕರಣ ನಡೆದಿದೆ. ಸುಧಾಕರ್ ರಾಜ್ ಛಾಯಾಗ್ರಹಣ ಚಿತ್ರಕ್ಕಿದ್ದು 4 ಹಾಡುಗಳಿಗೆ ಸಂತು ಮಾಸ್ಟರ್ ಕೊರಿಯೋಗ್ರಫಿ ಮಾಡಿದ್ದಾರೆ.

ಈಗಾಗಲೇ ಸಣ್ಣ ಸಣ್ಣ ಟೀಸರ್‌ಗಳು ರಿಲೀಸ್ ಆಗಿ ಡೆವಿಲ್ ಸಿನಿಮಾ ಕುತೂಹಲ ಮೂಡಿಸಿದೆ. ದರ್ಶನ್ ಲುಕ್, ಗೆಟಪ್, ಮ್ಯಾನರಿಸಂ ಎಲ್ಲವೂ ಹೊಸತಾಗಿದೆ. ಇನ್ನು ಚಿತ್ರದಲ್ಲಿ ರಾಜ್ಯದ ಮುಖ್ಯಮಂತ್ರಿ ಆಗಿಯೂ ದರ್ಶನ್ ನಟಿಸಿದ್ದಾರೆ ಎನ್ನಲಾಗ್ತಿದೆ. ಹಾಗಾಗಿ ಸಿನಿಮಾ ಬಗ್ಗೆ ನಿರೀಕ್ಷೆ ಹೆಚ್ಚಿದೆ. ಇದ್ರೇ ನೆಮ್ದಿಯಾಗಿರ್ಬೇಕ್ ಸಾಂಗ್ ಅಭಿಮಾನಿಗಳಿಗೆ ಕೊಂಚ ನಿರಾಸೆ ಮೂಡಿಸಿದ್ದು ಸುಳ್ಳಲ್ಲ. ಈಗ ಬರುವ ರೊಮ್ಯಾಂಟಿಕ್ ಸಾಂಗ್ ಹೇಗಿರುತ್ತದೆ ಎಂದು ಕಾದು ನೋಡಬೇಕಿದೆ.

ಡಿಸೆಂಬರ್‌ನಲ್ಲಿ ಡೆವಿಲ್ ಸಿನಿಮಾ ಜೊತೆಗೆ ಮಾರ್ಕ್ ಹಾಗೂ 45 ಚಿತ್ರಗಳು ಬಿಡುಗಡೆ ಆಗಲಿದೆ. ಹಾಗಾಗಿ ವರ್ಷಾಂತ್ಯಕ್ಕೆ ಸ್ಯಾಂಡಲ್‌ವುಡ್ ಬಾಕ್ಸಾಫೀಸ್ ಜೋರಾಗಿ ಸದ್ದು ಮಾಡುವ ಸುಳಿವು ಸಿಗುತ್ತಿದೆ.

# ಕಸ ವಿಲೇವಾರಿ ಮಾಡದವರು ಜವಾಬ್ದಾರಿ ಮರೆತ ನಾಗರಿಕರು

## ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿ ಮೇಯರ್ ಗಿರೀಶ್ ಚನ್ನವೀರಪ್ಪ ಬೇಸರ

• ಪ್ರಜೋದಯ ವರದಿ

**ಹಾಸನ:** ರಸ್ತೆ ಮೇಲೆ ಕಸ ಎಸೆಯುತ್ತಿರುವವರು ವಿದ್ಯಾವಂತರೇ, ಮನೆ ಮುಂದೆ ಪ್ರತಿ ದಿನವೂ ಕಸ ವಿಲೇವಾರಿ ವಾಹನ ಬಂದರೂ ಸಹಕಾರ ನೀಡದವರು ಜವಾಬ್ದಾರಿ ಮರೆತ ನಾಗರೀಕರು ಎಂದು ಮೇಯರ್ ಗಿರೀಶ್ ಚನ್ನವೀರಪ್ಪ ಅವರು ಬೇಸರ ವ್ಯಕ್ತಪಡಿಸಿದರು.

ನಗರದ ರಿಂಗ್ ರಸ್ತೆ ಬದಿಯ ಚಿಕ್ಕಹೊನ್ನೇನ ಹಳ್ಳಿ ರಸ್ತೆ ಬಳಿ ಸ್ವಚ್ಛತಾ ಹೀ ಸೇವಾ ಅಭಿಯಾನ ದಡಿ ವಿಶಿಷ್ಟ ಸ್ವಚ್ಛತಾ ಹೀ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸ್ವಚ್ಛತಾ ಹೀ ಸೇವಾ ಅಭಿಯಾನ, ಏಕ್ ದಿನ, ಏಕ್ ಗಂಟೆ, ಏಕ್ ಸ್ಥಳದಲ್ಲಿ ಎಂಬ ತತ್ವದಡಿ ನಗರವನ್ನು ಸ್ವಚ್ಛ ಗೊಳಿಸಲು ಪ್ರೇರೇಪಿಸುತ್ತದೆ ಎಂದು ಹೇಳಿದರು.

ಸಾರ್ವಜನಿಕರು ಮನೆಯಲ್ಲಿನ ಕಸವನ್ನು ರಸ್ತೆಗೆ ಎಸೆಯದೆ, ನಿಯಮಿತವಾಗಿ ವಿಲೇವಾರಿ ವಾಹನಗಳು ಅಥವಾ ನಗರಸಭೆ ಟ್ರ್ಯಾಕ್ಟರ್ ಮೂಲಕ ಸುರಕ್ಷಿತವಾಗಿ ವಿಲೇವಾರಿ ಮಾಡ ಬೇಕು. ಪ್ಲಾಸ್ಟಿಕ್ ಬ್ಯಾಗ್ ಬದಲು ಬಟ್ಟೆ ಬ್ಯಾಗ್ ಬಳಸಿ ಕಸ ಸಂಗ್ರಹಿಸುವ ಮೂಲಕ ಮಹಾನಗರ ಪಾಲಿಕೆಗೆ ಸಹಕಾರ ನೀಡಲು ಪ್ರೋತ್ಸಾಹಿಸಿದರು.

ಸ್ವಚ್ಛತೆಯಲ್ಲಿ ಸಹಕಾರ ನೀಡುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದ್ದು, ನಮ್ಮ ಮನೆ, ನಮ್ಮ ಊರು, ನಮ್ಮ ದೇಶ ಎಂಬ




ಭಾವನೆಯೊಂದಿಗೆ ತಮ್ಮ ಪರಿಸರವನ್ನು ಸ್ವಚ್ಛವಾಗಿರಿಸಬೇಕು. ಈ ಮೂಲಕ ಸ್ವಚ್ಛತಾ ಹೀ ಸೇವಾ ಅಭಿಯಾನ ನಗರದ ಸಾರ್ವಜನಿಕರ ಗಮನ ಸೆಳೆದಿದ್ದು, ಸ್ಥಳೀಯ ಆಡಳಿತ ಮತ್ತು ನಾಗರಿಕರ ಸಹಯೋಗದಿಂದ ಮುಂದುವರಿದರೆ, ನಗರವನ್ನು ಸ್ವಚ್ಛಗೊಳಿಸುವ ಹಾದಿಯಲ್ಲಿ ಮಹತ್ವದ ಹೆಜ್ಜೆ ಇಡಲಾಗಿದೆ. ಇದೇ ವೇಳೆ ಕಸ ವಿಲೇವಾರಿಯನ್ನು ವೈಜ್ಞಾನಿಕ ರೀತಿಯಲ್ಲಿ ಮಾಡಲು ಸಹಕಾರ ಕೊಡುವಂತೆ ಮತ್ತೊಮ್ಮೆ ಕೋರಿದರು.

ಶ್ರಮದಾನ ಕಾರ್ಯಕ್ರಮದಲ್ಲಿ ನಗರ ನಿವಾಸಿಗಳು, ಮಹಾನಗರ ಪಾಲಿಕೆಯ ಎಲ್ಲಾ ವಿಭಾಗದ ಸಿಬ್ಬಂದಿ, ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮತ್ತು ಸ್ವಯಂ ಸೇವಕರು ಪಾಲ್ಗೊಂಡು ಯಶಸ್ವಿಯಾಗಿ ನೆರವೇರಿಸಿದರು. ಇದೇ ಸಂದರ್ಭದಲ್ಲಿ ಚಿಕ್ಕಹೊನ್ನೇನಹಳ್ಳಿ ರಸ್ತೆಯ ಉದ್ದಗಲಕ್ಕೂ ಇದ್ದ ಕಸವನ್ನು ಮಹಾಪೌರರಾದ ಗಿರೀಶ್ ಚನ್ನವೀರಪ್ಪ ನೇತೃತ್ವದಲ್ಲಿ ಆಯುಕ್ತ ಕೃಷ್ಣಮೂರ್ತಿ, ಲಯನ್ಸ್ ಖಜಾಂಚಿ ಹೆಚ್.ಆರ್.ಚನ್ನೇಗೌಡ, ಪರಿಸರ ಪ್ರಭಾರ ಇಂಜಿನೀಯರ್ ಕೆ.ಆರ್.ಕವಿತಾ, ಲಯನ್ಸ್ ವಲಯ ಅಧ್ಯಕ್ಷ ಹೆಚ್.ಕೆ.ನಾಗೇಶ್, ರವಿ ನಾಕಲಗೂಡು, ನಗರಸಭೆ ಸಿಬ್ಬಂದಿ, ಸ್ವಯಂ ಸೇವಕರು, ಲಯನ್ಸ್ ಕ್ಲಬ್ ಪದಾಧಿಕಾರಿಗಳು ಸ್ವಚ್ಛತೆಯಲ್ಲಿ ಪಾಲ್ಗೊಂಡಿದ್ದರು

# 35 ವಾರ್ಡ್‌ಗಳಲ್ಲೂ ಕಾಮಗಾರಿಗೆ ಟೆಂಡರ್: ಮೇಯರ್

• ಮೊದಲನೇ ಪುಟದಿಂದ

ಮಾತ್ರ ದೂರುಗಳನ್ನು ಹೇಳುತ್ತೀರ. ಆದರೆ, ಲಿಖಿತ ರೂಪದಲ್ಲಿ ದೂರು ನೀಡಿದರೆ ಮಾತ್ರ ಕ್ರಮ ಕೈಗೊಳ್ಳಲು ಸಾಧ್ಯವಾಗಲಿದೆ. ಸದಸ್ಯರು ದೂರು ನೀಡಿದರೂ ಗುಣ ಮಟ್ಟದ ಕಾಮಗಾರಿ ನಿರ್ವಹಣೆ ಮಾಡದಿದ್ದರೆ ಅಧಿಕಾರಿ ಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಎಚ್ಚರಿಸಿದರು.

ಈ ಹಿಂದೆ ಕರೆಯಲಾಗಿರುವ ಟೆಂಡರ್ ತೆರೆಯಲು ಹಿಂದಿನ ಆಯುಕ್ತ ರಮೇಶ್ ನಿರ್ವಹಿಸಿದ್ದ ಮಹಾನಗರ ಪಾಲಿಕೆಯ ಟೆಂಡರ್ ಮ್ಯಾಪಿಂಗ್ ಕೆಲಸ ಮಾಡುತ್ತಿಲ್ಲ. ಪರ್ಯಾಯವಾಗಿ ಕ್ರಮ ಕೈಗೊಳ್ಳುವ ಕುರಿತು ಆಯುಕ್ತ ಕೃಷ್ಣಮೂರ್ತಿ ಭರವಸೆ ನೀಡಿದರು.

**ಶಿಕ್ಷಣ ಸಂಸ್ಥೆ ಒತ್ತುವರಿಗೆ ತೆರವುಗೊಳಿಸಿ**

ಸಭೆ ಆರಂಭವಾಗುತ್ತಿದ್ದಂತೆ ಸದಸ್ಯ ಯೋಗೇಂದ್ರ ಕುಮಾರ್ (ಬಾಬು) ಅವರು, ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಯವರು ಕೋಟ್ಯಾಂತರ ರೂ. ಮೌಲ್ಯದ ಆಸ್ತಿ, ಸರ್ವೆ ನಂ.397ರ 1.37 ಎಕರೆ ಜಾಗವನ್ನು ಕಬಳಿಸಿದ್ದಾರೆ. ಹಿಂದಿನ ಹಲವು ಸಭೆಗಳಲ್ಲಿ ವಿಷಯ ಪ್ರಸ್ತಾಪಿಸಿದರೂ ಕ್ರಮ ಕೈಗೊಂಡಿಲ್ಲ. ಮೊದಲು ಈ ವಿಷಯ ಇತ್ಯರ್ಥಪಡಿಸಿ ಮುಂದಿನ ನಡವಳಿಗೆ ಮುಂದಾಗಬೇಕೆಂದು ಆಗ್ರಹಿಸಿದರು.

ಪ್ರತಿಕ್ರಿಯಿಸಿದ ಮೇಯರ್, ಸಂಬಂಧಪಟ್ಟ ಸಂಸ್ಥೆಗೆ ಈಗಾಗಲೇ ನೋಟೀಸ್ ನೀಡಲಾಗಿದೆ. ಇಂಡೀಕರಣಗೊಳಿಸಿ ಮುಂದಿನ ಸಭೆಯಲ್ಲಿ ಸ್ಪಷ್ಟ ಮಾಹಿತಿ ನೀಡುತ್ತೇವೆಂದು ಭರವಸೆ ನೀಡಿದರು.

ಸದಸ್ಯ ಮಂಜುನಾಥ್ ಧ್ವನಿಗೂಡಿಸಿ, ಮಲೆನಾಡು ಕಾಲೇಜಿನ ಆಡಳಿತ ಮಂಡಳಿ ಈವರೆಗೆ ಎಷ್ಟು ತೆರಿಗೆ ಪಾವತಿಸಿದೆ ಮತ್ತು ಎಷ್ಟು ಕಟ್ಟಡಗಳಿಗೆ ಅನುಮತಿ ಪಡೆದಿದೆ ಎಂಬ ವಿವರಬೇಕು. ಬಾಕಿ ತೆರಿಗೆ ಶೀಘ್ರ ವಸೂಲಿ ಮಾಡಬೇಕೆಂದು ಒತ್ತಾಯಿಸಿದರು.

**ಕ್ರಿಮಿನಲ್ ಕೇಸ್ ದಾಖಲಿಸಿ**

ನಗರದಲ್ಲಿ ಜಾಹೀರಾತು ನಾಮಫಲಕ ಅಳವಡಿಕೆಯಲ್ಲಿ ಭಾರೀ ಅವ್ಯವಹಾರ ನಡೆದಿದೆ. ಕೇವಲ ಒಂದು ವರ್ಷದ ಗುತ್ತಿಗೆ ಟೆಂಡರ್ ಕರೆದರೂ 15 ವರ್ಷಗಳಂತೆ ದಾಖಲೆ ಮಾಡಿಕೊಂಡಿದ್ದಾರೆ. ಸಂಬಂಧಿಸಿದ ಕಡತಗಳು ನಾಪತ್ತೆಯಾಗಿವೆ. ಹಿಂದಿನ ಆಯುಕ್ತ ಸತೀಶ್ ಅವರೇ ಇದರ ಹೊಣೆಗಾರರು. ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕೆಂದು ಸದಸ್ಯರು ಒಟ್ಟಾಗಿ ಆಗ್ರಹಿಸಿದರು.

ಸದಸ್ಯ ಮೋಹನ್ ಕುಮಾರ್ ಅವರು ಮಾತನಾಡಿ, ನನ್ನ ಅವಧಿಯಲ್ಲಿ ಕೇವಲ ಒಂದು ವರ್ಷಕ್ಕಷ್ಟೇ ಗುತ್ತಿಗೆ ನೀಡಿದ್ದೆವು. ನಂತರದ ದಾಖಲೆ ಬದಲಾವಣೆ ಬಗ್ಗೆ ನನಗೆ ಸಂಬಂಧವಿಲ್ಲವೆಂದು ಸ್ಪಷ್ಟಪಡಿಸಿದರು. ಪ್ರತಿಕ್ರಿಯಿಸಿದ ಗಿರೀಶ್ ಚನ್ನವೀರಪ್ಪ ಅವರು, ಈ ಕುರಿತು ತ್ವರಿತ ತನಿಖೆ ನಡೆಸಿ, ಗುತ್ತಿಗೆದಾರರಿಂದ ಕಡತಗಳನ್ನು ವಶಪಡಿಸಿ ಕೊಳ್ಳಬೇಕೆಂದು ಪೌರಾಯುಕ್ತ ಕೃಷ್ಣಮೂರ್ತಿ ಅವರಿಗೆ ಸೂಚಿಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

**ಕಾಮಗಾರಿ ಬೇರೆ ವಾರ್ಡ್‌ಗೆ ವರ್ಗ**

ಸದಸ್ಯ ಚಂದ್ರೇಗೌಡ ಮಾತನಾಡಿ, 33ನೇ ವಾರ್ಡ್‌ಗೆ ಅನುಮೋದಿಸಿದ ಕಾಮಗಾರಿಗಳನ್ನು ದೇವರಾಯಪಟ್ಟಣ ಕ್ರಿಶ್ಚಿಯನ್ ಕಾಲೋನಿಗೆ ವರ್ಗಾವಣೆ ಮಾಡಲಾಗಿದೆ. ನನ್ನ ಮತದಾರರಿಗೆ ನಾನು ಏನು ಉತ್ತರ ಕೊಡಬೇಕೆಂದು. ಜನ ನನಗೆ ಚಪ್ಪಲಿಯಲ್ಲಿ ಹೊಡೆಯುತ್ತಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ನಿಮ್ಮ ವಾರ್ಡ್‌ಗೆ ಮಂಜೂರಾದ ಕಾಮಗಾರಿಯನ್ನು ಬೇರೆ ವಾರ್ಡ್‌ಗಳಲ್ಲಿ ಮಾಡಲು ಬಿಡುವುದಿಲ್ಲ, ಸ್ಥಗಿತಗೊಳಿಸುವುದಾಗಿ ಮೇಯರ್ ತಿಳಿಸಿದರು. ಉಪಮೇಯರ್ ಹೇಮಲತಾ ಕಮಲ್ ಕುಮಾರ್, ಅಧಿಕಾರಿಗಳು ಹಾಜರಿದ್ದರು.

# ಕೇಂದ್ರಿಯ ವಿದ್ಯಾಲಯಕ್ಕೆ ಸಂಸದ ಭೇಟಿ

• ಪ್ರಜೋದಯ ವರದಿ

**ಹಾಸನ:** ನಗರದ ಬಿ.ಕಾಟೀಹಳ್ಳಿಯಲ್ಲಿರುವ ಕೇಂದ್ರಿಯ ವಿದ್ಯಾಲಯಕ್ಕೆ ಸಂಸದ ಶ್ರೇಯಸ್ ಪಟೇಲ್ ಗುರುವಾರ ಭೇಟಿ ನೀಡಿ, ಶಾಲೆಯ ಮುಖ್ಯಸ್ಥರು ಹಾಗು ಮಕ್ಕಳೊಂದಿಗೆ ಮಾತುಕತೆ ನಡೆಸಿ ಕುಂದು ಕೊರತೆ ಆಲಿಸಿದರು.



ಶಿಕ್ಷಕರೊಂದಿಗೆ ಪ್ರತ್ಯೇಕ ಸಮಾಲೋಚನೆ ನಡೆಸಿ ಶಾಲೆಗೆ ಬೇಕಾದ ಅಗತ್ಯ ಸೌಲಭ್ಯಗಳ ಕುರಿತು ಚರ್ಚಿಸಿದರು. ಶಾಲೆಯ ಮಕ್ಕಳೊಂದಿಗೆ ಕೆಲ ಹೊತ್ತು ಸಮಯ ಕಳೆದ ಬಳಿಕ ಮಾತನಾಡಿದ ಸಂಸದರು, ಇದೊಂದು ವಿಶೇಷ ಶಾಲೆ, ಎಲ್ಲರೂ ಇಲ್ಲಿ ಪ್ರವೇಶ ಪಡೆಯಲು ಆಗುವುದಿಲ್ಲ. ಹೀಗಾಗಿ ಇಲ್ಲಿ ಕಲಿಯುವ ಮಕ್ಕಳು ಅದೃಷ್ಟ ಮಾಡಿದ್ದಾರೆ ಎಂದರು.

ಈ ವೇಳೆ ವಿದ್ಯಾರ್ಥಿಗಳು ಓದಿನ ಜೊತೆಗೆ ಕ್ರೀಡೆಯಲ್ಲೂ ತೊಡಗಿಸಿಕೊಳ್ಳಬೇಕು. ದೈಹಿಕ ಆರೋಗ್ಯ ಚೆನ್ನಾಗಿದ್ದರೆ ಎಲ್ಲವೂ ಚೆನ್ನಾಗಿರಲಿದೆ. ಶಾಲೆಯಲ್ಲಿ ಏನೇನು ಸಮಸ್ಯೆ ಇದೆಯೋ ಅದನ್ನು ಹಂತ ಹಂತವಾಗಿ ಮುಂದಿನ ದಿನಗಳಲ್ಲಿ ಬಗೆ ಹರಿಸಲಾಗುವುದೆಂದು ಭರವಸೆ ನೀಡಿದರು.

# ಅಂತರಂಗದ ಭಾವನೆ ಬರಹ ರೂಪಕ್ಕೆ ತಂದ ಭೈರಪ್ಪ

» **ಮೊದಲನೇ ಪುಟದಿಂದ**

ಪತ್ರಕರ್ತ ಮಂಜು ಬನವಾಸೆ ಅವರು ಮಾತನಾಡಿ, ಸಾಹಿತಿ ಎಸ್.ಎಲ್.ಭೈರಪ್ಪ ಅವರು ಲೇಖನಿ ಮೂಲಕ ಸಾಧನೆ ಮಾಡಿದ್ದಾರೆ. ಆಧುನಿಕ ತಂತ್ರಜ್ಞಾನ ದಿನಗಳಲ್ಲಿ ಪುಸ್ತಕ ಓದುವವರ ಸಂಖ್ಯೆ ಕಡಿಮೆ ಯಾಗಿದೆ ಎಂಬ ಚರ್ಚೆ ನಡುವೆಯೂ ತಮ್ಮದೇಯಾದ ಓದುಗ ಬಳಗವನ್ನು ಭೈರಪ್ಪ ಹೊಂದಿದ್ದರು. ಪತ್ರಕರ್ತನಾಗಿ ಅವರ ಸಂದರ್ಶನ ಮಾಡುವ ಅವಕಾಶ ನನಗೆ ಸಿಕ್ಕಿತ್ತು. ಮೇರು ಸಾಹಿತಿಯ ಅಗಲಿಕೆ ಸಾಹಿತ್ಯ ಲೋಕಕ್ಕೆ ತುಂಬಲಾರದ ನಷ್ಟವುಂಟು ಮಾಡಿದೆ ಎಂದು ಹೇಳಿದರು.

ಕನ್ನಡಪರ ಹೋರಾಟಗಾರ ಬಾಳ್ಳು ಗೋಪಾಲ್ ಅವರು ಮಾತನಾಡಿ, ಸಮಾಜದಲ್ಲಿ ಬೇರೂರಿರುವ ಜಾತಿ ಪದ್ಧತಿ ಕುರಿತು ಬರೆದಿರುವ ದಾಟು ಕಾದಂಬರಿ ನನ್ನ ಜೀವನದ ಮೇಲೆ ಗಾಢ ಪರಿಣಾಮ ಬೀರಿದೆ. ಅವರ ಪುಸ್ತಕಗಳ ವಿಮರ್ಶೆ ಮಾಡಲು ಯಾರಿಂದಲೂ ಸಾಧ್ಯವಿಲ್ಲ. ಅವರು ನಮ್ಮ ಜಿಲ್ಲೆಯವರು ಎನ್ನುವುದು ಹೆಮ್ಮೆಯ ವಿಚಾರವೆಂದರು. ಲೇಖಕರಾದ ಗೊರೂರು ಅನಂತರಾಜು, ಸುವರ್ಣ ಶಿವಪ್ರಸಾದ್, ಸುಂದ್ರೇಶ್ ಮತ್ತಿತರರು ಮಾತನಾಡಿದರು. ಅಂತರಾಷ್ಟ್ರೀಯ ಚಿತ್ರಕಲಾವಿದ ಕೆ.ಟಿ. ಶಿವಪ್ರಸಾದ್, ಜಾವಗಲ್ ಪ್ರಸನ್ನ, ಕಸಾಪ ಸಂಘಟನಾ ಕಾರ್ಯದರ್ಶಿ ಗಳಾದ ಹೆಚ್.ಎನ್.ಚಂದ್ರಶೇಖರ್, ಆರ್.ಬಿ. ಶಂಕರ್, ಜ್ಞಾನದೀಕ್ಷ ಪ್ಯಾರಾ ಮೆಡಿಕಲ್ ಕಾಲೇಜಿನ ಕಾರ್ಯದರ್ಶಿ ನಂದನ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಕ್ರೀಡಾ ಕಾರ್ಯದರ್ಶಿ ಆಶಾ, ಶಿಕ್ಷಕಿ ಕುಸುಮ ಇತರರು ಹಾಜರಿದ್ದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಬಿ.ಆರ್.ಬೊಮ್ಮೇಗೌಡ ಕಾರ್ಯಕ್ರಮ ನಿರೂಪಿಸಿದರು.

# ರಕ್ತದಾನದಿಂದ ರೋಗ ದೂರ : ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಸಕಲೇಶಪುರ:** ಭಾರತೀಯ ಜನತಾ ಪಕ್ಷವು ಸೇವಾ ಪಾಕ್ಷಿಕದಡಿ ಸಮಾಜ ಸೇವೆಯನ್ನು ಹಮ್ಮಿಕೊಂಡಿದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಗುರುವಾರ ಪಟ್ಟಣದ ಹಳೇಬಸ್ ನಿಲ್ದಾಣದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 75ನೇ ಹುಟ್ಟುಹಬ್ಬದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಸೆ.17 ರಿಂದ ಅ.2ರವರೆಗೆ ಪಕ್ಷದ ಸೂಚನೆಯಂತೆ ರಕ್ತದಾನ ಶಿಬಿರ, ಸ್ವಚ್ಛತಾ ಕಾರ್ಯ, ಪರಿಸರ ಸಂರಕ್ಷಣೆ, ಮ್ಯಾರಥಾನ್ ಓಟ ಮತ್ತು ಆರೋಗ್ಯ ಶಿಬಿರಗಳಂತಹ ಸಮಾಜಮುಖಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ನರೇಂದ್ರ ಮೋದಿ ಅವರ ಕನಸಿನಂತೆ ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವುದು ಪಕ್ಷದ ಪ್ರಮುಖ ಕೆಲಸವಾಗಿದೆ ಎಂದರು. ರಕ್ತದಾನದಿಂದ ರೋಗ ದೂರ ಮಾಡಬಹುದು. ನಿಯಮಿತವಾಗಿ ರಕ್ತದಾನ ಮಾಡುವುದು ಉತ್ತಮ ಎಂದರು.

ಬಿಜೆಪಿ ಜಿಲ್ಲಾ ಅಧ್ಯಕ್ಷ ಸಿದ್ದೇಶ್ ನಾಗೇಂದ್ರ, ಅವರು ಮಾತನಾಡಿ, ಭಾರತೀಯ ಜನತಾ ಪಕ್ಷದ ವತಿಯಿಂದ ಪ್ರತಿ ತಿಂಗಳಿಗೊಮ್ಮೆ ಒಂದು ಸೇವಾ ಪಾಕ್ಷಿಕ ಆಯೋಜಿಸಲಾಗುತ್ತದೆ. ಅದರಲ್ಲಿ ಪ್ರಮುಖವಾದುದು ರಕ್ತದಾನ ಶಿಬಿರ. ಸೆ.25ರಂದು ದೀನದಯಾಳ್ ಉಪಾಧ್ಯಾಯಜೀ ಅವರ 109ನೇ ಜನ್ಮದಿನವನ್ನು ಸಹ ಸ್ಮರಿಸುತ್ತೇವೆ. ಈ ಸಂದರ್ಭದಲ್ಲಿ ಶಾಸಕ ಸಿಮೆಂಟ್ ಮಂಜು ಅವರ ನೇತೃತ್ವದಲ್ಲಿ ಬೃಹತ್ ರಕ್ತದಾನ ಶಿಬಿರ ಆಯೋಜಿಸಲಾಗಿದೆ ಎಂದರು.

ರಕ್ತದಾನವೇ ನಿಜವಾದ ಉಡುಗೆ, ಇದು ದೇಹದಲ್ಲಿ ನಿರಂತರವಾಗಿ ಉತ್ಪತ್ತಿಯಾಗುವ ರಕ್ತಕ್ಕೆ ಪರ್ಯಾಯ ವಿಲ್ಲ. ಈ ಶ್ರೇಷ್ಠ ದಾನದಲ್ಲಿ ಭಾಗವಹಿಸಿದ ಕಾರ್ಯಕರ್ತರು, ಬಂಧುಗಳು ಮತ್ತು ವಿಶೇಷವಾಗಿ ಯುವಕರು ಹೆಚ್ಚಿನ ಪ್ರಮಾಣದಲ್ಲಿ ಪಾಲ್ಗೊಂಡಿದ್ದಾರೆ. ಅವರೆಲ್ಲರಿಗೂ ಭಗವಂತ ಆರೋಗ್ಯವನ್ನು ನೀಡಲಿ. ನಮ್ಮ ದೇಶದ ಹೆಮ್ಮೆ, ಪ್ರಧಾನಮಂತ್ರಿಗಳಿಗೆ ದೀರ್ಘಾಯಸ್ಸು ಮತ್ತು ಆರೋಗ್ಯ ದೊರೆಯಲಿ ಎಂದು ಹೇಳಿದರು.

ನೂರಕ್ಕೂ ಅಧಿಕ ಜನರು ರಕ್ತದಾನ ಮಾಡಿದರು. ರಕ್ತದಾನ ಮಾಡಿದವರಿಗೆ ಸಸಿಗಳನ್ನು ಕಾಣಿಕೆಯಾಗಿ ನೀಡಲಾಯಿತು. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಮಿತ್ ಶೆಟ್ಟಿ, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರಾದ ನೇತ್ರಾವತಿ, ಪುರಸಭಾ ಸದಸ್ಯರಾದ ರೇಖಾ ರುದ್ರ ಕುಮಾರ್, ವನಜಾಕ್ಷಿ, ಪಕ್ಷದ ಜಿಲ್ಲಾ ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಪ್ರಧಾನ ಕಾರ್ಯದರ್ಶಿಗಳಾದ ಸೋಮಶೇಖರ್, ಮಧು, ಪುನೀತ್ ಬನ್ನಹಳ್ಳಿ, ಪ್ರತಾಪ್ ಭಾಗವಹಿಸಿದ್ದರು.




# ಹಾಸನಾಂಬ ಭಕ್ತರಿಗೆ ಈ ವರ್ಷವೂ ಪ್ರವಾಸ ಭಾಗ್ಯ

» **ಮೊದಲನೇ ಪುಟದಿಂದ**

ಪಾಳ್ಯ ಗ್ರಾಮದಲ್ಲಿ ರುವ ಜನಾರ್ಧನ ದೇವಾಲಯ, ಅಬ್ಬಿ ಜಲಪಾತ, ಬೆಟ್ಟದ ಭೈರವೇಶ್ವರ ದೇವಸ್ಥಾನ ಒಟ್ಟು 182 ಕಿ.ಮೀ. ದೂರದ ಪ್ರಯಾಣ ಇದಾಗಿದೆ. ಪ್ರಯಾಣ ದರ ವಯಸ್ಕರಿಗೆ 500 ರೂ. ಮತ್ತು ಮಕ್ಕಳಿಗೆ 400 ರೂ. ಎಂದು ನಿಗದಿಪಡಿಸಲಾಗಿದೆ.

**ಪ್ಯಾಕೇಜ್ 2:** ಬೆಳಿಗ್ಗೆ 7.30ಕ್ಕೆ ಹಾಸನದಿಂದ ಸಕಲೇಶಪುರ ತಾಲ್ಲೂಕಿನ ಮುಂಜರಾಬಾದ್ ಕೋಟೆ, ಮೂಕನಮನೆ ಜಲಪಾತ, ಬಿಸ್ಲೆ ಘಾಟ್ ಒಟ್ಟು 192 ಕಿ.ಮೀ. ಪ್ರಯಾಣ ಇದಾಗಿದ್ದು, ವಯಸ್ಕರಿಗೆ 525 ರೂ. ಹಾಗು ಮಕ್ಕಳಿಗೆ 425 ರೂ. ಶುಲ್ಕ ಗೊತ್ತುಪಡಿಸಲಾಗಿದೆ.

**ಪ್ಯಾಕೇಜ್ 3:** ಹಾಸನದಿಂದ ಬೆಳಿಗ್ಗೆ 7 ಗಂಟೆಗೆ ಬೇಲೂರು ಚನ್ನಕೇಶವ ದೇವಾಲಯ ಭೇಟಿ, ಯಗಚಿ ಜಲಸಾಹಸ ಕೇಂದ್ರ, ಹಳೇಬೀಡಿನ ಪುಷ್ಪಗಿರಿ ಬೆಟ್ಟ, ಹೊಯ್ಸಳೇಶ್ವರ ದೇವಾಲಯ, ಕೊಂಡಜ್ಜಿಯ ವರದರಾಜಸ್ವಾಮಿ ದೇವಾಲಯ, ಸೀಗೆಗುಡ್ಡದ ಮಳೆಮಲ್ಲೇಶ್ವರ ದೇಗುಲ ವೀಕ್ಷಣೆ, ಒಟ್ಟು 116 ಕಿ.ಮೀ. ಪ್ರಯಾಣ ಇದಾಗಿದೆ. ವಯಸ್ಕರಿಗೆ 375 ರೂ. ಮತ್ತು ಮಕ್ಕಳಿಗೆ 275 ರೂ. ಟಿಕೆಟ್ ದರ ಇರಲಿದೆ.

**ಪ್ಯಾಕೇಜ್ 4:** ನುಗ್ಗೇಹಳ್ಳಿ ಲಕ್ಷ್ಮೀ ನರಸಿಂಹಸ್ವಾಮಿ ದೇವಾಲಯ, ಶ್ರವಣಬೆಳಗೊಳ ವಿಂಧ್ಯಗಿರಿ ಹಾಗು ಚಂದ್ರಗಿರಿ ಬೆಟ್ಟ, ಬೆಲಸಿಂದ ಉದ್ಯಾನವನದ ಒಟ್ಟು ಪ್ರಯಾಣ 131 ಕಿ.ಮೀ. ಆಗಲಿದ್ದು ವಯಸ್ಕರಿಗೆ 400 ರೂ., ಮಕ್ಕಳಿಗೆ 300 ರೂ. ಪಾವತಿಸಬೇಕು.

**ಪ್ಯಾಕೇಜ್ 5:** ಕೋರವಂಗಲದ ಬೂಚೇಶ್ವರ ದೇಗುಲ, ಹಾರನಹಳ್ಳಿ ಗ್ರಾಮದ ಕೇಶವ ಹಾಗು ಸೋಮವೇಶ್ವರ ದೇವಸ್ಥಾನ, ಮಾಲೇಕಲ್ ತಿರುಪತಿ, ಜೇನುಕಲ್ ಸಿದ್ದೇಶ್ವರ ಬೆಟ್ಟ, ಗಾಂಧೀಜಿ ಚಿತಾ ಭಸ್ಮ, ಶಾಂತಿಗ್ರಾಮದ ನರಸಿಂಹಸ್ವಾಮಿ ದೇವಾಲಯ, ಹಾಸನದ ಗೆಂಡೆಕಟ್ಟೆ ಉದ್ಯಾನವನ ಬಳಿಕ ಹಾಸನಕ್ಕೆ ತಲುಪುವುದು. ಟಿಕೆಟ್ ದರ 400 ಹಾಗು 300 ರೂ. ಇರಲಿದೆ.

**ಪ್ಯಾಕೇಜ್ 6:** ಹಾಲುವಾಗಿಲು ಕಟ್ಟೆ, ಶೆಟ್ಟಿಹಳ್ಳಿ ಚರ್ಚ್, ಕೋನಾಪುರದ ರಂಗನಾಥಸ್ವಾಮಿ ದೇವಾಲಯ, ಕೊಣನೂರು ತೂಗು ಸೇತುವೆ, ರಾಮನಾಥಪುರದ ಸುಬ್ರಹ್ಮಣ್ಯ ಮತ್ತು ರಾಮೇಶ್ವರ ದೇಗುಲ, ಗೊರೂರು ಹೇಮಾವತಿ ಜಲಾಶಯಕ್ಕೆ ಭೇಟಿ ನೀಡುವುದು. ಒಟ್ಟು 138 ಕಿ.ಮೀ. ಪ್ರಯಾಣ ಇದಾಗಿದೆ.

**ಪ್ಯಾಕೇಜ್ 7:** ಜಾವಗಲ್‌ನ ಲಕ್ಷ್ಮೀ ನರಸಿಂಹಸ್ವಾಮಿ ದೇವಾಲಯ, ಅರಕೆರೆ ಚನ್ನಕೇಶವ ದೇವಸ್ಥಾನ, ಬೆಟ್ಟದಪುರ ರಂಗನಾಥಸ್ವಾಮಿ ದೇವಸ್ಥಾನ ಹಾಗು ಬಾಣಾವರ ಕೋಟೆ, ಹಾಸನದ ವಸ್ತು ಸಂಗ್ರಹಾಲಯ ವೀಕ್ಷಣೆಗೆ ಅವಕಾಶ ಕಲ್ಪಿಸಿದೆ. ವಯಸ್ಕರಿಗೆ 400ರೂ. ಮತ್ತು ಮಕ್ಕಳಿಗೆ 300ರೂ. ದರ ನಿಗದಿಪಡಿಸಲಾಗಿದೆ.

# ಅಪಘಾತ : ವ್ಯಕ್ತಿ ಸಾವು

• ಪ್ರಜೋದಯ ವರದಿ

**ಹಾಸನ:** ಜೀಪ್ ಡಿಕ್ಕಿಯಾಗಿ ವ್ಯಕ್ತಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಕೆ.ಹೊನ್ನೇನಹಳ್ಳಿ ಸಮೀಪ ಬುಧವಾರ ನಡೆದಿದೆ.

ತಿಪಟೂರು ತಾಲ್ಲೂಕು ಬಸಿಲೇಹಳ್ಳಿ ಗ್ರಾಮದ ನವೀನ್‌ಕುಮಾರ್ (36) ಮೃತರು. ಪಿತೃ ಪಕ್ಷ ಹಿನ್ನ ಲೆಯಲ್ಲಿ ಸಂಬಂಧಿಕರ ಮನೆಗೆ ತೆರಳಿದ್ದ ಅವರು ವಾಪಾಸ್ಸಾಗುತ್ತಿದ್ದಾಗ ಹೆರಗು ಕಡೆಯಿಂದ ಬಂದ ಜೀಪ್ ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ಅವರನ್ನು ಹಿಮ್ಸ್‌ಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ದುದ್ದ ಠಾಣೆ ಯಲ್ಲಿ ಪ್ರಕರಣ ದಾಖಲಾಗಿದೆ.

## 5.20 ಲಕ್ಷ ರೂ. ನಗದು ಕಳವು

• ಪ್ರಜೋದಯ ವರದಿ

**ಬೇಲೂರು:** ಮನೆಯ ಹಿಂಬಾಗಿಲಿನ ಬೀಗ ಮುರಿದು ಒಳನುಗ್ಗಿರುವ ಕಳ್ಳರು 70 ಸಾವಿರ ರೂ., ಎರಡು ಮೊಬೈಲ್ ಹಾಗು ಕಾರಿನಲ್ಲಿಟ್ಟಿದ್ದ 4.50 ಲಕ್ಷ ರೂ. ಕದ್ದಿರುವ ಘಟನೆ ತಾಲ್ಲೂಕಿನ ದೊಡ್ಡಮೇದೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಸ್ವಾಮಿಗೌಡ ಎಂಬುವವರ ಮನೆಯಲ್ಲಿ ಕಳ್ಳತನವಾಗಿದೆ. ಬುಧವಾರ ರಾತ್ರಿ 12ರ ಸಮಯದಲ್ಲಿ ಬಂದಿರುವ ನಾಲ್ಕೈದು ಜನರು ಕೃತ್ಯ ಎಸಗಿದ್ದಾರೆ ಎನ್ನಲಾಗಿದೆ. ಸ್ವಾಮಿಗೌಡ ಅವರು ರಾತ್ರಿ 11 ಗಂಟೆಗೆ ಕಾರಿನಲ್ಲಿ 4.50 ಲಕ್ಷ ರೂ. ಹಣವಿಟ್ಟು ಲಾಕ್ ಮಾಡಿ ಮನೆಗೆ ತೆರಳಿದ್ದರು. ಪ್ಯಾಂಟ್ ಜೇಬಿನಲ್ಲಿ 70 ಸಾವಿರ ರೂ. ಇಟ್ಟುಕೊಂಡಿದ್ದರು.

ತಮ್ಮ ಮನೆಯ ಮೊದಲನೇ ಮಹಡಿಯಲ್ಲಿರುವ ಕೋಣೆಗೆ ಮಲಗಲೆಂದು ತೆರಳಿದ್ದರು. ಮನೆಯ ಕೆಳಗಡೆ ಕೋಣೆಯಲ್ಲಿ ಮಲಗಿದ್ದ ತಂದೆ, ತಾಯಿ, ಚಿಕ್ಕಮ್ಮ ತಾವು ಮಲಗಿದ್ದ ರೂಮ್ ಬಾಗಿಲು ಹೊರಗಡೆಯಿಂದ ಲಾಕ್ ಆಗಿದೆ ಯಾಕೆಂದು ಕರೆ ಮಾಡಿ ಸ್ವಾಮಿಗೌಡರಿಗೆ ಕೇಳಿದ್ದಾರೆ. ತಕ್ಷಣ ಸ್ವಾಮಿಗೌಡ ಅವರು ಕೆಳಗಿಳಿದು ಬಂದು ನೋಡಿದಾಗ ಕಳ್ಳತನವಾಗಿರುವುದು ತಿಳಿದಿದೆ. ಮನೆಯ ಹಿಂಬದಿ ಬಟ್ಟೆ ಒಣಗಿಸಲು ಕಟ್ಟಿದ್ದ ಹಗ್ಗವನ್ನು ಕತ್ತರಿಸಿ ಬಾಗಿಲು ಮುರಿದು ಒಳ ಪ್ರವೇಶಿಸಿರುವ ಕಳ್ಳರು ಮನೆಯ ಹಾಲ್‌ನ ಸೋಫಾ ಮೇಲೆ ಇಟ್ಟಿದ್ದ ಪ್ಯಾಂಟ್ ಜೇಬಿ ನಲ್ಲಿದ್ದ 70 ಸಾವಿರ ರೂ., 2 ಸ್ಯಾಮ್‌ಸಂಗ್ ಮೊಬೈಲ್, 25 ಸಾವಿರ ರೂ. ಮೌಲ್ಯದ ಸ್ಯಾಮ್ ಸಂಗ್ ಕಂಪನಿಯ ಕೈಗಡಿಯಾರ, ಕಾರಿನಲ್ಲಿಟ್ಟಿದ್ದ 4.50 ಲಕ್ಷ ರೂ. ನಗದು, ಡೆಬಿಟ್ ಕಾರ್ಡ್ ಕದ್ದಿ ದ್ದಾರೆ. ಕಳ್ಳರ ಚಲನವಲನ ದೃಶ್ಯಾವಳಿ ಮನೆಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಬೇಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೈಕ್ ಡಿಕ್ಕಿ: ಪಾದಚಾರಿ ಸಾವು

• ಪ್ರಜೋದಯ ವರದಿ

**ಅರಕಲಗೂಡು:** ಬೈಕ್ ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ರಾಮನಾಥಪುರ-ಬೆಟ್ಟದಪುರ ರಸ್ತೆಯಲ್ಲಿ ನಡೆದಿದೆ.

ತಾಲ್ಲೂಕಿನ ಗಂಗೂರು ಗ್ರಾಮದ ಮಂಜೇಗೌಡ (30) ಮೃತರು. ಬುಧವಾರ ಸಂಜೆ ರಸ್ತೆ ದಾಟುತ್ತಿದ್ದಾಗ ರಾಮನಾಥಪುರ ಕಡೆಯಿಂದ ವೇಗವಾಗಿ ಬಂದ ಬೈಕ್ ಡಿಕ್ಕಿಯಾಗಿ ಸ್ಥಳದಲ್ಲೇಮೃತಪಟಿದ್ದಾರೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಎಸ್.ಎಲ್.ಭೈರಪ್ಪಗೆ ಭಾರತ ರತ್ನ ನೀಡಲು ಅಗ್ರಹ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ವಿಶ್ವಶ್ರೇಷ್ಠ ಸಾಹಿತಿ ದಿ||ಎಸ್.ಎಲ್.ಭೈರಪ್ಪ ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಬೇಕೆಂದು ಕನ್ನಡ ಸಾಹಿತ್ಯ ಪರಿಷತ್ ಹಿರೀಸಾವೆ ಹೋಬಳಿ ಅಧ್ಯಕ್ಷ ಎಚ್.ಎ.ಪ್ರಮೋದ್ ಅವರು ಹೇಳಿದರು.



ತಾಲ್ಲೂಕಿನ ಹಿರೀಸಾವೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಮಾತನಾಡಿ, ರಾಜ್ಯ ಸರ್ಕಾರವು ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು ಎಂದರು.

ಸರಸ್ವತಿ ಸಮ್ಮಾನ್ ಶ್ರೀ ಎಸ್.ಎಲ್. ಭೈರಪ್ಪ ಅವರು ಬರೆದಿರುವ ಕಾದಂಬರಿಗಳು ಕೇವಲ ಕಾಲ್ಪನಿಕವಲ್ಲ. ಸಮಾಜ ಹಾಗೂ ಜನಸಾಮಾನ್ಯರ ಬದುಕಿಗೆ ಹತ್ತಿರವಾಗಿದ್ದು ಯುವ ಸಮುದಾಯಕ್ಕೆ ದಾರಿದೀಪವಾಗಲಿವೆ. ಅವರ ಕಾದಂಬರಿಗಳು ಮಾರ್ಗಸೂಚಿಯಾಗಿವೆ ಎಂದು ತಿಳಿಸಿದರು.

ಹಿರಿಯ ಸಾಹಿತಿ ಡಾ.ಚಂದ್ರೇಗೌಡ ನಿಂಬೇಹಳ್ಳಿ ಅವರು ಮಾತನಾಡಿ, ಎಸ್.ಎಲ್.ಭೈರಪ್ಪ ಅವರು ದೈಹಿಕವಾಗಿ ಅಷ್ಟೇ ನಮ್ಮಿಂದ ಮರೆಯಾಗಬಹುದು ಆದರೆ ಅವರ ಕೃತಿ, ಕಾದಂಬರಿಗಳು ಜನ-ಮನದಲ್ಲಿ ಸಾವಿರಾರು ವರ್ಷಗಳ ಕಾಲ ಚಿರವಾಗಿ ಉಳಿದು ಇತಿಹಾಸ ಪುಟಗಳಲ್ಲಿ ಸೇರಲಿರುವುದು ವಿಶೇಷ ಎಂದು ಭಾವುಕರಾದರು.

ಚನ್ನರಾಯಪಟ್ಟಣ ತಾಲ್ಲೂಕಿನ ಸಂತೇಶಿವರ ಎಂಬ ಪುಟ್ಟ ಹಳ್ಳಿಯಲ್ಲಿ ಹುಟ್ಟಿ ವಿಶ್ವ ಮಟ್ಟದಲ್ಲಿ ಬೆಳೆದು ಹೆಸರು ಹಾಗೂ ಕೀರ್ತಿ ಪಡೆದ ಅವರು ದೈವ ಸಾಹಿತಿಯಾಗಿದ್ದಾರೆ. ಅವರು ಬರೆದ ಕೆಲ ಕಾದಂಬರಿಗಳು ಸಿನಿಮಾ ರೂಪ ಪಡೆದರೆ ಬಹುತೇಕ ಕಾದಂಬರಿಗಳು ಹಲವು ಭಾಷೆಗಳಲ್ಲಿ ಅನುವಾದಗೊಂಡಿವೆ. ಸಾಹಿತ್ಯ ಕ್ಷೇತ್ರದಲ್ಲಿ ಇಷ್ಟು ಎತ್ತರಕ್ಕೆ ಬೆಳೆಯುವುದು ಸುಲಭವಲ್ಲ ಎಂದರು.

ಎಸ್.ಎಲ್.ಭೈರಪ್ಪ ಅವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿದ ಗಣ್ಯರು ಪುಷ್ಪಾರ್ಪಣೆಗೊಳಿಸಿ ಒಂದು ನಿಮಿಷ ಕಾಲ ಮೌನಾಚರಣೆ ಮಾಡಿದರು. ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕದ ಕಾರ್ಯದರ್ಶಿಗಳಾದ ಮಾರುತಿ, ಮಂಜು, ಹರೀಶ್, ಖಜಾಂಚಿ ತೋಟಿ ಮಂಜು ನಾಥ್, ನಿಕಟಪೂರ್ವ ಅಧ್ಯಕ್ಷ ಡಾ.ಎಚ್.ಬಿ.ಶಂಕರ್, ನಿವೃತ್ತ ಪ್ರಾಂಶುಪಾಲ ತಮ್ಮಣ್ಣಗೌಡ, ಕಸಾಪ ಸದಸ್ಯರಾದ ವೆಂಕಟೇಶ್, ಮುರಳೀಧರ್, ಜೀವಿ ಗೋವಿಂದ್, ಮಂಜುನಾಥ್, ಬೋರೇಗೌಡ, ಮಾದಲಗೆರೆ ನಂಜೇಗೌಡ, ಪುಟ್ಟರಾಜು, ಭಾರತಿ ಪುರುಷೋತ್ತಮ್ ಇತರರು ಇದ್ದರು.

# ಸಹಕಾರ ಸಂಘದ ಬೆಳವಣಿಗೆಯಲ್ಲಿ ಪದಾಧಿಕಾರಿಗಳ ಪಾತ್ರ ಅಧಿಕ

• ಪ್ರಜೋದಯ ವರದಿ

**ಹಾಸನ:** ಸಹಕಾರ ಸಂಘ-ಸಂಸ್ಥೆಗಳು ಯಶಸ್ವಿಯಾಗಿ ಮುನ್ನಡೆಯಲು ಆ ಸಂಘದ ನಿರ್ದೇಶಕರು ಮತ್ತು ಸದಸ್ಯರೇ ಶಕ್ತಿಯೆಂದು ಹೊಯ್ಸಳ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ಬಿ.ಕೆ.ರುದ್ರಪ್ಪ ಅವರು ಹೇಳಿದರು.




ನಗರದ ವಿಶ್ವೇಶ್ವರಯ್ಯ ಭವನದಲ್ಲಿ ಗುರುವಾರ ಆಯೋಜಿಸಿದ್ದ ಹೊಯ್ಸಳ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಹಾಗು ಪ್ರತಿಭಾ ಪುರಸ್ಕಾರ, ನೌಕರರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿ, ಕಳೆದ ಮೂರು ವರ್ಷಗಳಿಂದ ಸಂಘ ಸ್ಥಾಪನೆಯಾದ ಉದ್ದೇಶದಂತೆ ಪಾರದರ್ಶಕ ಆಡಳಿತ ಮಾಡಿಕೊಂಡು ಪದಾಧಿಕಾರಿಗಳಿಗೆ ಕಡಿಮೆ ಬೆಲೆಯಲ್ಲಿ ಗುಣಮಟ್ಟದ ಕಾಮಗಾರಿ ಮೂಲಕ ಸುಸಜ್ಜಿತ ಬಡಾವಣೆ ನಿರ್ಮಾಣ ಮಾಡಿ ನಿವೇಶನಗಳನ್ನು ಒದಗಿಸುತ್ತಾ ಬಂದಿದೆ. ಮುಂದಿನ ದಿನಗಳಲ್ಲಿಯೂ ಇದೇ ರೀತಿ ಮುಂದುವರೆಯಲು ಎಲ್ಲರ ಸಹಕಾರ ಅಗತ್ಯವೆಂದರು.


ಮೂರು ವರ್ಷಗಳ ಕಾಲ ಸಂಘ ಯಶಸ್ವಿಯಾಗಿ ಮುನ್ನಡೆಯಲು ಎಲ್ಲಾ ಸದಸ್ಯರು ಹಾಗು ನಿರ್ದೇಶಕರು ಹೆಗಲಿಗೆ ಹೆಗಲು ಕೊಟ್ಟ ಪರಿಣಾಮ ಇಂದು ಸಂಘ ಉತ್ತಮವಾಗಿ ಬೆಳೆದು ಬಂದಿದೆ. ಮುಂದಿನ ದಿನಗಳಲ್ಲಿಯೂ ಸಂಘದ ನೇತೃತ್ವ ವಹಿಸುವವರು. ಇದೇ ರೀತಿ ಯಶಸ್ವಿಯಾಗಿ ಪಾರದರ್ಶಕ ಆಡಳಿತ ನಡೆಸಲಿ ಎಂದು ಹಾರೈಸಿದರು.

ಸಂಘದ ಉಪಾಧ್ಯಕ್ಷ ಡಾ.ಲಕ್ಷ್ಮಿಕಾಂತ್ ಅವರು ಮಾತನಾಡಿ, ಸಂಘದ ಆಯವ್ಯಯ, ಲಾಭ-ನಷ್ಟ, ಮುಂದಿನ ಕಾರ್ಯ ಯೋಜನೆಗಳ ಬಗ್ಗೆ ವಿವರಿಸಿ ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಹೊಸ ಬಡಾವಣೆ ನಿರ್ಮಿಸಿ ಸಂಘದ ಸದಸ್ಯರಿಗೆ ಹಸ್ತಾಂತರ ಮಾಡಲು ಎಲ್ಲರ ಸಹಕಾರ ಅಗತ್ಯವೆಂದರು.

ಹೊಯ್ಸಳ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಸದಸ್ಯರು ಹಾಗು ನಿರ್ದೇಶಕರ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಸದಸ್ಯರಿಗೆ ಗುರುತಿನ ಚೀಟಿ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕಂಚಮಾರನಹಳ್ಳಿ ಕಾಂತರಾಜ್, ವಿನೇಶ್, ಪದ್ಮರಾಜ್, ಕೆ.ಆರ್.ಮಂಜೇಗೌಡ, ರುದ್ರೇಶ್, ಗೋಪಾಲ್, ಶಿವಾನಂದ್ ನಾಯಕ್, ಸತ್ಯನಾರಾಯಣ, ಕೆ.ಪಿ.ಮಂಜುನಾಥ್, ಮುಷ್ತಾಕ್ ಅಹಮ್ಮದ್ ಶೇಕ್, ವಾಸೀಮ್ ಷರೀಫ್, ಚನ್ನಕೇಶವ, ಕೃಷ್ಣಮೂರ್ತಿ, ತಮ್ಮಣ್ಣ ಶೆಟ್ಟಿ, ಶಿವಸ್ವಾಮಿ, ಸಿ.ಎನ್.ಉಷಾ, ರಘು ಇತರರಿದ್ದರು.

# ಕುರುಬರನ್ನು ಎಸ್‌ಟಿಗೆ ಸೇರಿಸಲು ವಿರೋಧಿಸಿ ಮನವಿ



• ಪ್ರಜೋದಯ ವರದಿ

**ಹಾಸನ:** ಕುರುಬ ಜಾತಿಯನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸದಂತೆ ಒತ್ತಾಯಿಸಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಸಭಾದಿಂದ ಜಿಲ್ಲಾಡಳಿತದ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗುರುವಾರ ಮನವಿ ಸಲ್ಲಿಸಲಾಯಿತು.

ರಾಜ್ಯದಲ್ಲಿ ಸುಮಾರು 45 ಲಕ್ಷ ಜನಸಂಖ್ಯೆ ಇರುವ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗು ರಾಜಕೀಯವಾಗಿ ಮುಂದುವರಿದಿರುವ ಕುರುಬ ಜಾತಿಯಲ್ಲಿ ಯಾವುದೇ ಬುಡಕಟ್ಟು ಲಕ್ಷಣಗಳಿಲ್ಲ. ಆದರೂ ರಾಜ್ಯ ಕಾಂಗ್ರೆಸ್ ಸರ್ಕಾರ ಎಸ್‌ಟಿಗೆ ಸೇರಿಸಲು ಮುಂದಾಗಿರುವ ಹುನ್ನಾರ ಖಂಡನೀಯ. ಕೂಡಲೇ ಸರ್ಕಾರ ಇಂತಹ ಪ್ರಯತ್ನ ಕೈ ಬಿಡಬೇಕೆಂದು ಸಭಾದ ಪದಾಧಿಕಾರಿ ಗಳು ಒತ್ತಾಯಿಸಿದರು.

ವಿರೋಧದ ನಡುವೆಯೂ ಕುರುಬ ಜಾತಿಯನ್ನು ಎಸ್‌ಟಿ ಪಂಗಡಕ್ಕೆ ಸೇರಿಸಿದರೆ ಹೋರಾಟದ ಜೊತೆಗೆ ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸುವುದಾಗಿ ಎಚ್ಚರಿಕೆ ನೀಡಿ ದರು.

ಸಭಾದ ಜಿಲ್ಲಾಧ್ಯಕ್ಷ ಎನ್.ಟಿ.ಶ್ರೀನಿವಾಸ್, ಯುವ ಘಟಕದ ರಾಜ್ಯ ಉಪಾಧ್ಯಕ್ಷ ರವಿ ಕುಮಾರ್, ಜಿಲ್ಲಾ ಕಾರ್ಯದರ್ಶಿ ದೊಡ್ಡರಂಗಯ್ಯ, ಜಿಲ್ಲಾ ಉಪಾಧ್ಯಕ್ಷ ವಿರೂಪಾಕ್ಷ, ಯುವ ಘಟಕ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಿರಣ್, ಉಪಾಧ್ಯಕ್ಷ ಮಧು, ಹರೀಶ್, ಬ್ರಹ್ಮದೇವರಹಳ್ಳಿ ಮಧು, ಗೌರವ ಅಧ್ಯಕ್ಷ ಸಂತೋಷ್, ಚರಣ್, ಮಲ್ಲಿಕ್, ಹಿರಿಯ ಮಾರ್ಗದರ್ಶಕ ಸಿದ್ದಮಲ್ಲನಾಯಕ ನೇರ್ಲಿಗೆ, ಬಲರಾಮಮೂರ್ತಿ, ಜೈಭೀಮ್ ಬ್ರಿಗೇಡ್ ಜಿಲ್ಲಾಧ್ಯಕ್ಷ ರಾಜೇಶ್ ಇದ್ದರು.

## ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಸರ್ವ ಸದಸ್ಯರ ಸಭೆ

# ರಾಷ್ಟ್ರೀಕೃತ ಬ್ಯಾಂಕ್ ಮಾದರಿಯಲ್ಲಿ ಸಂಘದ ವ್ಯವಹಾರ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ರಾಷ್ಟ್ರೀಕೃತ ಬ್ಯಾಂಕ್ ಮಾದರಿಯಲ್ಲಿಯೇ ಕೃಷಿ ಪತ್ತಿನ ಸಹಕಾರ ಸಂಘ ದಲ್ಲಿ ಸದಸ್ಯರು ಹಾಗೂ ಸಾರ್ವಜನಿಕರು ಠೇವಣಿ ಇರಿಸಿ ಒಡವೆ ಮೇಲೆ ಸಾಲ ಪಡೆಯಬಹುದೆಂದು ಸಂಘದ ಕಾರ್ಯನಿರ್ವಾಹಕ ಅಧಿಕಾರಿ ಎಚ್.ಎನ್.ಹರೀಶ್ ಅವರು ಹೇಳಿದರು.




ತಾಲ್ಲೂಕಿನ ಹಿರೀಸಾವೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಆವರಣದಲ್ಲಿ ಸಂಘದ ಅಧ್ಯಕ್ಷ ಹೆಚ್.ಜೆ.ಮಹೇಶ್ ಅಧ್ಯಕ್ಷತೆಯಲ್ಲಿ ನಡೆದ ಸರ್ವ ಸದಸ್ಯರ ಸಭೆಯಲ್ಲಿ ಮಾತನಾಡಿ, ಅದರಿಂದ ಸಂಸ್ಥೆಯ ಅಭಿವೃದ್ಧಿಗೆ ಸಹಕಾರವಾಗಲಿದೆ. ಸಂಘವು 2024-25ನೇ ಸಾಲಿನಲ್ಲಿ 98 ಸಾವಿರ ರೂ. ಲಾಭಗಳಿಸಿದೆ. ಪಡಿತರ, ಗೊಬ್ಬರ ವಿತರಣೆ, ಪಿಗ್ಮಿ ಹಾಗೂ ಇತರೆ ವ್ಯವಹಾರಗಳು ಪಾರದರ್ಶಕವಾಗಿ ನಡೆಯುತ್ತಿದೆ. ಆಡಳಿತ ಮಂಡಳಿಯ ಮಾರ್ಗಸೂಚಿಯಂತೆಯೇ ಕಾರ್ಯ ಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಪಾರದರ್ಶಕ ವ್ಯವಹಾರವಿದ್ದಲ್ಲಿ ಮಾತ್ರ ಯಾವುದೇ ಸಂಘ-ಸಂಸ್ಥೆಗಳು ಪ್ರಗತಿ ಹೊಂದಲು ಸಾಧ್ಯ. ಸದಸ್ಯರು ಹಾಗೂ ಸಾರ್ವಜನಿಕರಿಗೂ ನ್ಯಾಯಯುತ ಹಾಗೂ ಕ್ರಮಬದ್ಧವಾಗಿ ಅನುಕೂಲಗಳನ್ನು ಕಲ್ಪಿಸಲು ಸಹಕಾರಿ ಎಂದು ತಿಳಿಸಿದರು.

ನಿರ್ದೇಶಕ ಕೃಷ್ಣೇಗೌಡ ಅವರು ಮಾತನಾಡಿ, ಮೂರು ತಿಂಗಳಿಗೊಮ್ಮೆ ಅಧ್ಯಕ್ಷರ ಬದಲಾವಣೆಯಿಂದ ಸಂಘಕ್ಕೆ ಹೆಚ್ಚು ಖರ್ಚು ಆಗುತ್ತಿದ್ದೆ. ಪ್ರತಿ ಸಲ ಅಧ್ಯಕ್ಷರ ಚುನುವಾಣೆಗೆ 10 ಸಾವಿರ ರೂ. ವೆಚ್ಚವಾಗುತ್ತಿದೆ. ನಂತರ ಸರಿಪಡಿಸಿಕೊಳ್ಳಬೇಕು. ಅದಕ್ಕೆ ನಿರ್ದೇಶಕ ಬೋರಣ್ಣ ಸೇರಿ ಇತರೆ ನಿರ್ದೇಶಕರು ವಿರೋಧ ವ್ಯಕ್ತಪಡಿಸಿ, ಎಲ್ಲರಿಗೂ ಅಧ್ಯಕ್ಷರಾಗಬೇಕೆಂಬ ಆಸೆ ಇರುತ್ತದೆ ಎಂದು ಹೇಳಿದರು.

ಸಂಘದ ಸದಸ್ಯರಿಗೆ ಹೊರತು ಬೇರೆಯವರಿಗೆ ಎಂಟಿಎಲ್ ಸಾಲ ನೀಡಿರುವುದಕ್ಕೆ ರೈತ ಸಂಘದ ಜಿಲ್ಲಾ ಅಧ್ಯಕ್ಷ ರಘು ವಿರೋಧ ವ್ಯಕ್ತಪಡಿಸಿದರು. ಸಂಘದ ಲಾಭಾಂಶವನ್ನು ಷೇರು ದಾರರಿಗೆ ಹಂಚಿಕೆ ಮಾಡವಂತೆ ರವಿಕುಮಾರ್ ಮತ್ತು ಎಚ್.ಜಿ. ಮಂಜುನಾಥ್ ಒತ್ತಾಯಿಸಿದರು. ರಾಷ್ಟ್ರೀಯ ಹಬ್ಬಗಳ ಆಚರಣೆ ಮಾಡುವಾಗ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಅಭಿನಂದಿಸುವಂತೆ ಸದಸ್ಯ ರಂಜಿತ್ ಸಲಹೆ ನೀಡಿದರು.

ಲಾಭ, ನಷ್ಟ, ರಸಗೊಬ್ಬರ ಮಾರಾಟ ವಿಷಯಗಳ ಬಗ್ಗೆ ದಿವಾಕರ್, ಚಂದ್ರಣ್ಣ, ಕಿರೀಸಾವೆ ನಾಗರತ್ನಮ್ಮ ಇತರೆ ಸದಸ್ಯರು ಚರ್ಚೆ ಮಾಡಿದರು. ನಿರ್ದೇಶಕರಾದ ಬೋರಣ್ಣ, ಬಾಬುಹಾಗೂಸದಸ್ಯರು ಇದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

C M Y K C M Y K C M Y K C M Y K